# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು : ಮಹೇಶ್ವರಿ ಭೀಮಶಿ ಭರಮಣ್ಣವರ
EDITOR : MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail:
belagavivarte1@gmail.com

Volume: 01 | Issue : 03 | MONDAY 02-03-2026 | PRGI No : KNKAN/26/A0962 | Pages:4 | Rs.2.00 | M: 9742418836


# ಅಹಿಂದ ಉತ್ತರಾಧಿಕಾರಕ್ಕೆ ಜಾರಕಿಹೊಳಿ ಸಿದ್ಧತೆ: ಹಿಂದುಳಿದ ವರ್ಗಗಳ ಚ್ಯಾಂಪಿಯನ್ ಪಟ್ಟಕ್ಕೆ "ಸಾಹುಕಾರ್" ಸಮರ್ಥರೇ?

ಬೆಳಗಾವಿ: ರಾಜ್ಯ ಕಾಂಗ್ರೆಸ್‌ನಲ್ಲಿ ಸಂಭಾವ್ಯ ನಾಯಕತ್ವ ಬದಲಾವಣೆಯ ಕುರಿತು ಮಾತುಕತೆಗಳು ಮತ್ತು ಊಹಾಪೋಹಗಳು ಹೆಚ್ಚಾಗುತ್ತಿದ್ದಂತೆ ತೆರೆಮರೆಯಲ್ಲಿ ರಾಜಕೀಯ ಲಾಬಿ ತೀವ್ರಗೊಂಡಿದೆ.

ಈ ಚರ್ಚೆಗಳ ಕೇಂದ್ರಬಿಂದು ಅಹಿಂದ ಸಾಮಾಜಿಕ ಒಕ್ಕೂಟದ ಭವಿಷ್ಯದ ನಾಯಕತ್ವ, ಕಾಂಗ್ರೆಸ್ ಪಕ್ಷದ ಪ್ರಮುಖ ಚುನಾವಣಾ ಬೆನ್ನೆಲುಬು ಎಂದು ದೀರ್ಘಕಾಲದಿಂದ ಪರಿಗಣಿಸಲ್ಪಟ್ಟಿದೆ. ಸದ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಹಿಂದ ರಾಜಕೀಯದ ನಿರ್ವಿವಾದದ ನಾಯಕನಾಗಿ ಉಳಿದಿದ್ದಾರೆ. ಆದರೆ ಸಿದ್ದರಾಮಯ್ಯ ನಂತರ ಅಹಿಂದ ಚಳುವಳಿಯನ್ನು ಯಾರು ಮುನ್ನಡೆಸುತ್ತಾರೆ? ಎಂಬ ಬಗ್ಗೆ ಈಗ ರಾಜಕೀಯ ವಲಯಗಳಲ್ಲಿ ವ್ಯಾಪಕವಾಗಿ ಚರ್ಚಿಸಲಾಗುತ್ತಿದೆ.

ಇದಕ್ಕೆ ಪುಷ್ಠಿ ನೀಡುವಂತೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೆಸರು ಕೇಳಿ ಬರುತ್ತಿದೆ. ಜಾರಕಿಹೊಳಿ ತಮ್ಮ ಇತ್ತೀಚಿನ ರಾಜಕೀಯ ನಡೆಗಳಿಂದ ಎಲ್ಲರ ಗಮನ ಸೆಳೆಯುತ್ತಿದ್ದಾರೆ. ಮುಂದಿನ ಪೀಳಿಗೆಯ ಅಹಿಂದ ನಾಯಕನಾಗಿ ತಮ್ಮನ್ನು ತಾವು ಇರಿಸಿಕೊಳ್ಳುವ ಲೆಕ್ಕಾಚಾರ ನಡೆಸುತ್ತಿದ್ದಾರೆ.

ಜಾರಕಿಹೊಳಿ ಇತ್ತೀಚೆಗೆ ನವದೆಹಲಿಗೆ ತೆರಳಿ, ಅಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ನಂತರ ಅವರ ರಾಜಕೀಯ ಚಟುವಟಿಕೆ ಗೋಚರವಾಗಿದೆ. ಹಿರಿಯ ನಾಯಕ ಕೆ.ಎನ್. ರಾಜಣ್ಣ ಭಾಗವಹಿಸಿದ್ದ ಈ ಸಭೆಯಲ್ಲಿ ಕರ್ನಾಟಕದ ವಿಕಸನಗೊಳ್ಳುತ್ತಿರುವ ರಾಜಕೀಯ ಪರಿಸ್ಥಿತಿ ಮತ್ತು ಪಕ್ಷದೊಳಗೆ ಎರಡನೇ ಹಂತದ ಅಹಿಂದ ನಾಯಕತ್ವವನ್ನು ಉತ್ತೇಜಿಸುವ ತುರ್ತು ಅಗತ್ಯದ ಬಗ್ಗೆ ಚರ್ಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಸಿದ್ದರಾಮಯ್ಯ ಅವರ ನಾಯಕತ್ವದಲ್ಲಿ ಅಹಿಂದ ಮತಗಳು ಕ್ರೋಢೀಕರಿಸಲ್ಪಟ್ಟಿದ್ದರೂ,



ಸಿದ್ದರಾಮಯ್ಯ ನಿರ್ಗಮನದ ನಂತರ ಆ ಒಗ್ಗಟ್ಟನ್ನು ಕಾಪಾಡಿಕೊಳ್ಳುವುದು ಗಂಭೀರ ಸವಾಲಾಗಬಹುದು ಎಂದು ಜಾರಕಿಹೊಳಿ ಒತ್ತಿ ಹೇಳಿದರು. ಪಕ್ಷದ ದೀರ್ಘಕಾಲೀನ ಸ್ಥಿರತೆಗೆ ಪರ್ಯಾಯ ನಾಯಕತ್ವವನ್ನು ಬಲಪಡಿಸುವುದು ಈಗ ಅತ್ಯಗತ್ಯ ಎಂದು ಅವರು ವಾದಿಸಿದ್ದಾರೆ ಎಂದು ತಿಳಿದುಬಂದಿದೆ.

ದೆಹಲಿಯಿಂದ ಹಿಂದಿರುಗಿದ ನಂತರ, ಜಾರಕಿಹೊಳಿ ರಾಜ್ಯಾದ್ಯಂತ ಪ್ರಚಾರ ಪ್ರಯತ್ನಗಳನ್ನು ಹೆಚ್ಚಿಸಿದ್ದಾರೆ, ತಮ್ಮ ಪ್ರವಾಸಗಳ ಸಮಯದಲ್ಲಿ ಅಹಿಂದ ಸಮುದಾಯದ ನಾಯಕರೊಂದಿಗೆ ಸಭೆಗಳನ್ನು ನಡೆಸುತ್ತಿದ್ದಾರೆ. ಈ ನಿ ಕಾರ್ಯಗಳು ಸಾಂಪ್ರದಾಯಿಕ ರಾಜಕೀಯ ರಚನೆಗಳನ್ನು ಮೀರಿ ವಿಶ್ವಾಸವನ್ನು ಬೆಳೆಸುವ ಮತ್ತು ಸಾಮಾಜಿಕ ಬೆಂಬಲವನ್ನು ಕ್ರೋಢೀಕರಿಸುವ ಪ್ರಯತ್ನವೆಂದು ನೋಡಲಾಗುತ್ತದೆ.

ಉತ್ತರ ಕನ್ನಡ ಜಿಲ್ಲೆಯ ಕುಮಟಾ ಪಟ್ಟಣದಲ್ಲಿ, ಅವರು ಇತ್ತೀಚೆಗೆ ಸಮುದಾಯ ಪ್ರತಿನಿಧಿಗಳೊಂದಿಗೆ ಜಿಲ್ಲಾ ಮಟ್ಟದ ಸಭೆ ನಡೆಸಿದರು, ಅಹಿಂದ ರಾಜಕೀಯದ ಪ್ರಮುಖ ಆಧಾರಸ್ತಂಭಗಳಾದ ಸಾಮಾಜಿಕ ನ್ಯಾಯ, ಶೈಕ್ಷಣಿಕ ಪ್ರಗತಿ ಮತ್ತು ಉದ್ಯೋಗಾವಕಾಶಗಳ ಕುರಿತು ಚರ್ಚೆಗಳನ್ನು ಕೇಂದ್ರೀಕರಿಸಿದರು.

ಸಿದ್ದರಾಮಯ್ಯ ಅವರ ನಂತರ ಅಹಿಂದ ನಾಯಕತ್ವದಲ್ಲಿ ಸ್ಪಷ್ಟ ಉತ್ತರಾಧಿಕಾರಿಯ ಅನುಪಸ್ಥಿತಿಯು ಒಂದು ನಿರ್ವಾತವನ್ನು ಸೃಷ್ಟಿಸಿದೆ ಎಂದು ರಾಜಕೀಯ ವೀಕ್ಷಕರುಅಭಿಪ್ರಾಯ ಪಟ್ಟಿದ್ದಾರೆ, ಇದನ್ನು ಜಾರಕಿಹೊಳಿ ತುಂಬಲು ಉತ್ಸುಕರಾಗಿದ್ದಾರೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಅಧ್ಯಕ್ಷರನ್ನಾಗಿ ಅವರನ್ನು ನೇಮಿಸುವುದರಿಂದ ಪಕ್ಷದೊಳಗೆ ಅಹಿಂದ ಬಲವರ್ಧನೆ ಮತ್ತಷ್ಟು ಬಲಗೊಳ್ಳುತ್ತದೆ ಎಂದು ಅವರ ಬೆಂಬಲಿಗರು ವಾದಿಸುತ್ತಾರೆ. ಜಾರಕಿಹೊಳಿ ಕಾಂಗ್ರೆಸ್ ರಚನೆಯೊಳಗೆ ಬಲವಾದ ಸಾಂಸ್ಥಿಕ ಪ್ರಭಾವವನ್ನು ಹೊಂದಿದ್ದಾರೆಂದು ನಂಬಲಾಗಿದೆ, ಇದು ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಮತ್ತು ದಲಿತ ಸಮುದಾಯಗಳನ್ನು ಸಜ್ಜುಗೊಳಿಸುವಲ್ಲಿ ಪ್ರಯೋಜನವಾಗುತ್ತದೆ ಎಂದು ಹೇಳಲಾಗುತ್ತಿದೆ.

ಮುಖ್ಯವಾಗಿ, ಸಿದ್ದರಾಮಯ್ಯ ಅವರ ಆಂತರಿಕ ವಲಯದೊಂದಿಗೆ ಹೊಂದಿಕೊಂಡ ವರ್ಗಗಳಿಂದ ಸತೀಶ್ ಗೆ ಬೆಂಬಲವಿದೆ. ಭವಿಷ್ಯದಲ್ಲಿ ದಲಿತ ಮುಖ್ಯಮಂತ್ರಿಯಾಗುವ ಸಾಧ್ಯತೆಯ ಸುತ್ತ ಹೊಸ ಚರ್ಚೆಗಳು ಹೊರಹೊಮ್ಮುತ್ತಿರುವುದರಿಂದ, ಬದಲಾಗುತ್ತಿರುವ ರಾಜಕೀಯ ವಾತಾವರಣವು ಜಾರಕಿಹೊಳಿ ಪರವಾಗಿ ಕೆಲಸ ಮಾಡಬಹುದು.

2028 ರಲ್ಲಿ ಮುಖ್ಯಮಂತ್ರಿ ಹುದ್ದೆಗೆ ಜಾರಕಿಹೊಳಿ ಈಗಾಗಲೇ ಸಾರ್ವಜನಿಕವಾಗಿ ತಮ್ಮನ್ನು ತಾವು ಆಕಾಂಕ್ಷಿ ಎಂದು ಘೋಷಿಸಿಕೊಂಡಿದ್ದಾರೆ. ಆ ಸಂದರ್ಭದಲ್ಲಿ, ಭವಿಷ್ಯದ ಯಾವುದೇ ನಾಯಕತ್ವದ ಪ್ರಯತ್ನಕ್ಕೆ ಅಹಿಂದ ಏಕತೆಯನ್ನು ಬಲಪಡಿಸುವುದು ನಿರ್ಣಾಯಕವಾಗಿರುತ್ತದೆ ಎಂದು ರಾಜಕೀಯ ವಿಶ್ಲೇಷಕರು ನಂಬಿದ್ದಾರೆ.

**ಕಾಶಿ ಪೀಠದಿಂದ ಶಿವಲೀಲಾ ಪಾಟೀಲರಿಗೆ 'ಸೌಭಾಗ್ಯವತಿ ಸಿಂಧು ಸುಭಾಷ ಮ್ಹಮಾಣೆ ಮಾತೃಶಕ್ತಿ ಪ್ರಶಸ್ತಿ' ಪ್ರದಾನ**

# ಜನಪರ ಸೇವೆಗಳನ್ನು ಮುಕ್ತವಾಗಿ ಗುರುತಿಸಲು ಕರೆ



ಉತ್ತರಪ್ರದೇಶದ ವಾರಾಣಾಶಿಯಲ್ಲಿರುವ ಕಾಶಿ ಜ್ಞಾನಪೀಠದಲ್ಲಿ ಜರುಗಿದ ವಿಶೇಷ ಸಮಾರಂಭದಲ್ಲಿ ಹಿರಿಯ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಮಂಗಳವಾರ ಶಿವಭಕ್ತಿ ಪರಾಯಣಿ ಶಿವಲೀಲಾ ಪಾಟೀಲ ಅವರಿಗೆ 2026ನೆಯ ಸಾಲಿನ 'ಸೌಭಾಗ್ಯವತಿ ಸಿಂಧು ಸುಭಾಷ ಮ್ಹಮಾಣೆ ಮಾತೃಶಕ್ತಿ ಪ್ರಶಸ್ತಿ' ಪ್ರದಾನ ಮಾಡಿದರು. ಕಿರಿಯ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದರು, ಹಾರನಹಳ್ಳಿ ಕೋಡಿಮಠದ ಶ್ರೀ ಶಿವಾನಂದ ರಾಜೇಂದ್ರ ಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರು, ಗಣ್ಯರು ಇದ್ದರು.

ಧಾರವಾಡ : ಸಮಾಜದಲ್ಲಿ ನಡೆಯುವ ವಿವಿಧ ಕ್ಷೇತ್ರಗಳ ಜನಪರ ಸೇವೆಗಳನ್ನು ಮುಕ್ತವಾಗಿ ಗುರುತಿಸಿ ಪ್ರೋತ್ಸಾಹಿಸಬೇಕೆಂದು ವೀರಶೈವ ಧರ್ಮದ ಪಂಚಪೀಠಗಳಲ್ಲಿ ಒಂದಾಗಿರುವ ಕಾಶಿ ಜ್ಞಾನ ಪೀಠದ ಹಿರಿಯ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಕರೆನೀಡಿದರು.

ಅವರು ಉತ್ತರಪ್ರದೇಶದ ವಾರಾಣಾಸಿ ನಗರದಲ್ಲಿರುವ ತಮ್ಮ ಶ್ರೀಪೀಠದಲ್ಲಿ ಮಹಾಶಿವರಾತ್ರಿ ಆಚರಣೆಯ ಅಂಗವಾಗಿ ಮಂಗಳವಾರ ಹಮ್ಮಿಕೊಂಡಿದ್ದ ವಿಶೇಷ ಸಮಾರಂಭದಲ್ಲಿ ಬಾರ್ಶಿಯ ವಿಶ್ವಮಾತಾ ವಾರಕರೀ ಆಧ್ಯಾತ್ಮಿಕ ಬಾಲಿಕಾ ಸಂಸ್ಥೆಯ ಸಂಸ್ಥಾಪಕಿ ಶಿವಭಕ್ತಿ ಪರಾಯಣಿ ಶಿವಲೀಲಾ ಪಾಟೀಲ ಅವರಿಗೆ 2026ನೆಯ ಸಾಲಿನ 'ಸೌಭಾಗ್ಯವತಿ ಸಿಂಧು ಸುಭಾಷ ಮ್ಹಮಾಣೆ ಮಾತೃಶಕ್ತಿ ಪ್ರಶಸ್ತಿ' ಪ್ರದಾನ ಮಾಡಿ ಮಾತನಾಡುತ್ತಿದ್ದರು. ಮನುಷ್ಯನ ವ್ಯಕ್ತಿತ್ವವನ್ನು ಲಿಂಗ, ಜಾತಿ, ವರ್ಗಗಳ ಆಧಾರದ ಮೇಲೆ ವಿಂಗಡಿಸದೇ ಸಾಧನೆಯ ವಿಶಿಷ್ಟ ಪ್ರತಿಭೆಯಿಂದ ಗುರುತಿಸಿದಾಗ ವ್ಯಕ್ತಿತ್ವಕ್ಕೆ ವ್ಯಾಪಕ ಗೌರವ ಪ್ರಾಪ್ತವಾಗುತ್ತದೆ ಎಂದರು.

ಶಿವಲೀಲಾ ಪಾಟೀಲರು ಶಿವ ಕೀರ್ತನ ಕಾರರ ಪುತ್ರಿ. ಕೇವಲ 5ನೆಯ ವಯಸ್ಸಿನಿಂದಲೇ ಕೀರ್ತನೆ ಹೇಳಲು ಆರಂಭಿಸಿದ್ದು, ಕಳೆದ 20ವರ್ಷಗಳಿಂದ ಮಹಾರಾಷ್ಟ್ರದಾದ್ಯಂತ ಹಿಂದೂ ಸಂಸ್ಕೃತಿಯ ಸಂರಕ್ಷಣೆಗಾಗಿ ಕೀರ್ತನೆ ಮಾಡುತ್ತಿದ್ದಾರೆ. ತಮ್ಮ ಕೀರ್ತನ ಕಲೆಯ ಅಭಿವ್ಯಕ್ತಿಗೆ ಪ್ರಾಪ್ತವಾಗುವ ಸಂಭಾವನೆಯ ಸಂಪೂರ್ಣ ಹಣದಲ್ಲಿ ಸುಮಾರು 150 ಬಡ ಬಾಲಕಿಯರಿಗೆ ಉಚಿತವಾಗಿ ವಸತಿ, ಊಟ, ಬಟ್ಟೆಗಳನ್ನು ನೀಡಿ, ಶಾಲಾ ಶಿಕ್ಷಣದ ಜೊತೆಗೆ ಆಧ್ಯಾತ್ಮಿಕ ವಿದ್ಯೆಯ ತರಬೇತಿ ನೀಡುತ್ತಿದ್ದಾರೆ.

ಶಿವಲೀಲಾ ಪಾಟೀಲರ ಈ ಜನಸ್ನೇಹಿ ಕೈಂಕರ್ಯವನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದೂ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ತಿಳಿಸಿದರು.

ಕಾಶಿಪೀಠದ ಕಿರಿಯ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದರು. ಹಾರನಹಳ್ಳಿ ಕೋಡಿಮಠದ ಶ್ರೀ ಶಿವಾನಂದ ರಾಜೇಂದ್ರ ಸ್ವಾಮೀಜಿ, ಚೆನ್ನಗಿರಿಯ ಶ್ರೀ ಬಸವ ಜಯಚಂದ್ರ ಸ್ವಾಮೀಜಿ, ಶಹಾಪುರದ ಶ್ರೀ ಸುಗುರೇಶ್ವರ ಶಿವಾಚಾರ್ಯ ಸ್ವಾಮೀಜಿ, ಪ್ರಶಸ್ತಿಯ ಪ್ರಾಯೋಜಕ ಪಂಢರಪುರದ ದಾನಚಿಂತಾಮಣಿ ಸುಭಾಷ್ ಮ್ಹಮಾಣೆ, ಶಿವಲೀಲಾ ಪಾಟೀಲರ ತಾಯಿ ವರ್ಷಾ ಪಾಟೀಲ, ಪೀಠದ ವ್ಯವಸ್ಥಾಪಕ ಆರ್. ಕೆ. ಸ್ವಾಮಿ, ಶಿವಾನಂದ ಹಿರೇಮಠ, ಪರೀಕ್ಷಾ ವಿಭಾಗದ ಮುಖ್ಯಸ್ಥ ಸೊಲಾಪುರದ ರಾಜೇಂದ್ರ ಬಲಸೂರೇ, ಕರ್ನಾಟಕ, ಮಹಾರಾಷ್ಟ್ರ, ಉತ್ತರಪ್ರದೇಶ, ತೆಲಂಗಾಣ ರಾಜ್ಯಗಳಿಂದ ಆಗಮಿಸಿದ್ದ ಭಕ್ತಗಣ ಇದ್ದರು. ಶಿವಲೀಲಾ ಪಾಟೀಲ ಅವರ ವಿದ್ಯಾಲಯದ ನೂರಕ್ಕೂ ಹೆಚ್ಚು ಬಾಲಕಿಯರು ಭಜನೆ-ಕೀರ್ತನೆಯನ್ನು ಪ್ರಸ್ತುತಪಡಿಸಿದರು.

# ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬುವ ಕಾರ್ಯ ಮಾಡಿದ – ಸಾಹಿತಿ ಜಯಾನಂದ ಮಾದರ



ಗೋಕಾಕ: ತಾಲೂಕಿನ ಪ್ರಭಾ ನಗರ ಶುಗರ್ ಫ್ಯಾಕ್ಟರಿಯಲ್ಲಿನ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ದ್ವಿತೀಯ ವರ್ಷದ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮನೆಗಳಿಗೆ ಭೇಟಿ ನೀಡಿದ ಸಾಹಿತಿ ಹಾಗೂ ಸಿದ್ಧಾರ್ಥ ಲಲಿತ ಚಿತ್ರ ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಜಯಾನಂದ ಮಾದರ ಅವರು ವಾರ್ಷಿಕ ಪರೀಕ್ಷೆಗೆ ಸಿದ್ಧರಾದ ಹಿನ್ನೆಲೆಯಲ್ಲಿ ಅವರಿಗೆ ಆತ್ಮಸ್ಥೈರ್ಯ ತುಂಬುವ ಕಾರ್ಯ ಮಾಡಿದ್ದಾರೆ. ಇವರ ಆತ್ಮೀಯ ಗೆಳೆಯರು ಹಾಗೂ ಸಾಹಿತಿಗಳಾದ ಡಾ.ಲಕ್ಷ್ಮಣ ಚೌರಿ ಅವರ ಅಭಿನಂದನ ಗ್ರಂಥ ನೀಡಿ ಶುಭ ಹಾರೈಸಿದರು.

ಸರಕಾರಿ ಮುನ್ಸಿಪಲ್ ಹೈಸ್ಕೂಲ್ ಗೋಕಾಕ ವಿದ್ಯಾರ್ಥಿಗಳಾದ ದೊಡ್ಡಮ್ಮ ವಸಂತ ಚಳ್ಳಾಯಿ, ಆಲಿಯಾ ರುಕುಮೂದ್ದೀನ ಮಾರಿಹಾಳ, ಸಹನಾ ಹನುಮಂತ ಕಪ್ಪಲಗುದ್ದಿ, ಮತ್ತು ಲಕ್ಷ್ಮಣರಾವ ಜಾರಕಿಹೊಳಿ ಪಿ.ಯು ಕಾಲೇಜು ಗೋಕಾಕದ ವೈಷ್ಣವಿ ಪ್ರಕಾಶ ವಾಗುಲೆ ವಿದ್ಯಾರ್ಥಿಗಳ ಮನೆಗಳಿಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಪವನ ಕೆಂಪಣ್ಣ ಕಡಕೋಳ, ಶಂಕರ ಮಹೇಶ ಬಡಿಗೇರ,ತರುಣ ಮಲ್ಲಿಕಾರ್ಜುನ ಇಳಗೇರ ಮತ್ತು ವಿಶಾಲ ವಿಠಲ ಚಳ್ಳಾಯಿ, ಇದ್ದರು.

# ವಿಜ್ಞಾನ, ತಂತ್ರಜ್ಞಾನ ನಮ್ಮ ಬದುಕಿಗೆ ಪೂರಕವಾಗಬೇಕು

ಅಥಣಿ: ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ವೈಜ್ಞಾನಿಕ ಮನೋಭಾವ ಬೆಳೆಸುವುದು ಅಗತ್ಯವಾಗಿದೆ ಎಂದು ಎಸ್ ಡಿ ಎಂ ಸಿ ಅಧ್ಯಕ್ಷ ರಾಕೇಶ್ ಮೈಗೂರ ಹೇಳಿದರು.

ಅವರು ಇಲ್ಲಿನ ವಿಕ್ರಂಪುರ ಬಡಾವಣೆಯ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಹಾಗೂ ಉನ್ನತೀಕರಿಸಿದ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ದಶಮಾನೋತ್ಸವದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ವಿಜ್ಞಾನ ಮತ್ತು ತಂತ್ರಜ್ಞಾನ ನಮ್ಮ ಜೀವನದ ಒಂದು ಭಾಗವಾಗಿದೆ. ದೇಶದ ಕೃಷಿ ಪದ್ಧತಿಯಲ್ಲಿಯೂ ಇಂದು ಯಾಂತ್ರಿಕ ಕೃಷಿ ಮತ್ತು ಸುಧಾರಿತ ಬೇಸಾಯಗಳನ್ನು ಮಾಡಲಾಗುತ್ತಿದೆ. ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಲು ಇಂತಹ ವಿಜ್ಞಾನ ವಸ್ತು ಪ್ರದರ್ಶನ ಉತ್ತಮ ವೇದಿಕೆಯಾಗಿದೆ. ಸರ್ಕಾರಿ ಶಾಲೆಯ ಮಕ್ಕಳು ಕೂಡ ಕಳೆದ ಹತ್ತು ವರ್ಷಗಳಿಂದ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ವಿಜ್ಞಾನ ಶಿಕ್ಷಕರ ಕಾರ್ಯಕ್ಷಮತೆ ಹಾಗೂ ವಿದ್ಯಾರ್ಥಿಗಳ ಪರಿಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಲೆಯ ಮುಖ್ಯೋಪಾಧ್ಯಾಯ ಎಸ್ ಎಸ್ ಮುಗಳಖೋಡ ಮಾತನಾಡಿ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವ ಉದ್ದೇಶದಿಂದ ನಮ್ಮ ಶಾಲೆಯಲ್ಲಿ ಕಳೆದ ಹತ್ತು ವರ್ಷಗಳಿಂದ ಈ ವಿಜ್ಞಾನ ವಸ್ತು ಪ್ರದರ್ಶನ ಹಮ್ಮಿಕೊಳ್ಳುತ್ತಾ ಬಂದಿದ್ದೇವೆ. ಶಾಲೆಯ



ವಿದ್ಯಾರ್ಥಿಗಳು ಆಸಕ್ತಿಯಿಂದ ಭಾಗವಹಿಸುವ ಮೂಲಕ ವಿವಿಧ ಆವಿಷ್ಕಾರಗಳನ್ನು ಸೃಷ್ಟಿಸಿ ಇಲ್ಲಿ ಪ್ರದರ್ಶನ ಮಾಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಸದಸ್ಯ ರಾಜು ಡಾಲೆ, ಸಂಪನ್ಮೂಲ ಅಧಿಕಾರಿ ವಿ. ಪಿ ಸಾಲಿ, ವಿಜ್ಞಾನ ಶಿಕ್ಷಕಿ ಡಿ. ಎ. ಬರಡಗಿ, ಜಿ ಎನ್ ಕುಂಬಾರ, ವಿ ಎಸ್ ವಾಘಮೋರೆ, ಎ???ಂ ಕೋರಬು, ಎನ್. ಎಂ ನಿಡೋಣಿ, ಉಜ್ವಲ ಹೂಗಾರ ಉಜ್ವಲ ಹೂಗಾರ, ಬಿ. ಎಂ. ಗೋಟಖಿಂಡಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸಾಮಾಜಿಕ ಜಾಲ ತಾಣಗಳಲ್ಲಿ ಸುಳ್ಳು ಸುದ್ದಿ ಹರಡಿಸಿದರೆ ಕಠಿಣ ಕ್ರಮ – ಸಿಪಿಐ ಮುಲ್ಲಾ



ಘಟಪ್ರಭಾ: ಘಟಪ್ರಭಾ ಪಟ್ಟಣದಲ್ಲಿ ದಿ.28 ರಂದು ಯಾರೋ ಅಪರಿಚಿತ ಮಹಿಳೆಯು ಮಕ್ಕಳನ್ನು ಕಳುವು ಮಾಡುತ್ತಾಳೆ ಎಂದು ಸುಳ್ಳು ಸುದ್ದಿ ಹರಡಿದ್ದು ನಾಗರಿಕರು ಯಾವುದೇ ಚಿಂತೆಗೊಳಗಾಗಬಾರದು. ಇದರ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಯಾರಾದರೂ ಸುಳ್ಳು ಸುದ್ದಿ ಹರಡಿಸಿದರೆ ಅವರ ಮೇಲೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಘಟಪ್ರಭಾ ಪೋಲಿಸ್ ಠಾಣೆಯ ಸಿಪಿಐ ಎಚ್.ಡಿ.ಮುಲ್ಲಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರ ಹುಟ್ಟುಹಬ್ಬದ ಅರ್ಥಪೂರ್ಣ ಆಚರಣೆ

## ವಿಶೇಷ ಚೇತನ ಮಕ್ಕಳಿಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ಸರ್ಕಾರದಿಂದ ನೀಡಲಾಗುತ್ತಿದೆ; ಅವರ ಆಶ್ರಿತ ಕುಟುಂಬಗಳಿಗೂ ನೆರವು: ಜಿಲ್ಲಾಧಿಕಾರಿ ಸ್ನೇಹಲ್ ಆರ್



ಧಾರವಾಡ: ಜಿಲ್ಲೆಯ ಎಲ್ಲ ವಿಶೇಷ ಚೇತನ ಹಾಗೂ ದಿವ್ಯಾಂಗ ಮಕ್ಕಳ ಸಮೀಕ್ಷೆಯನ್ನು ಕೈಗೊಳ್ಳಲಾಗಿದ್ದು, ಅವರಿಗೆ ಅಗತ್ಯವಿರುವ ಉಪಕರಣ ಹಾಗೂ ಸೌಲಭ್ಯಗಳನ್ನು ಸರ್ಕಾರದಿಂದ ನೀಡಲಾಗುತ್ತಿದೆ. ವಿಶೇಷ ಚೇತನರನ್ನು ಸಂರಕ್ಷಿಸುತ್ತಿರುವ ಕುಟುಂಬಗಳಿಗೂ ಸರ್ಕಾರದ ನಿಯಮಾನುಸಾರ ನೆರವು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಇಂದು (ಫೆ. 27) ಬೆಳಿಗ್ಗೆ ಶಿಕ್ಷಕೀಯರ ಸರ್ಕಾರಿ ತರಬೇತಿ ಕಾಲೇಜು (ಟಿಸಿಡಬ್ಲ್ಯೂ) ಸಭಾಂಗಣದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸಂತೋಷ ಲಾಡ್ ಫೌಂಡೇಶನ್ ಮತ್ತು ಜನಮುಖಿ ಸೇವಾ ಸಂಸ್ಥೆ ಸಂಯುಕ್ತವಾಗಿ ಆಯೋಜಿಸಿದ್ದ ವಿಶೇಷ ಚೇತನರು ಹಾಗೂ ಅವರ ಕುಟುಂಬದವರೊಂದಿಗೆ ಸಂವಾದ ಮತ್ತು ಸಂತೋಷ ಲಾಡ್ ಫೌಂಡೇಶನ್ ನೀಡಿರುವ ವಿಕಲಚೇತನರ ಸಾಧನಗಳನ್ನು ವಿತರಿಸಿ, ಮಾತನಾಡಿದರು.

ವಿಕಲಚೇತನರನ್ನು ವಿಶೇಷ ಕಾಳಜಿ ಮತ್ತು ಹೆಮ್ಮೆಯಿಂದ ಸಂರಕ್ಷಿಸಬೇಕು. ಅವರ ಬಗ್ಗೆ ಬರೀ ಕರುಣೆ ತೋರದೆ, ನ್ಯಾಯಯುತವಾಗಿ ಅವರಿಗೆ ಸಿಗಬೇಕಾದ ಸರ್ಕಾರಿ ಸೌಲಭ್ಯಗಳನ್ನು ತಲುಪಿಸುವಲ್ಲಿ ಇಲಾಖೆಗಳು, ಅಧಿಕಾರಿಗಳು ಮತ್ತು ಸರ್ಕಾರೇತರ ಸಂಸ್ಥೆಗಳು ಕ್ರಮವಹಿಸಬೇಕೆಂದು ಅವರು ಹೇಳಿದರು.

ಸಂತೋಷ ಲಾಡ್ ಫೌಂಡೇಶನ್ ವತಿಯಿಂದ ಮಾದರಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಚಿವರ ಹುಟ್ಟುಹಬ್ಬದ ಹಿನ್ನಲೆಯಲ್ಲಿ ಅನೇಕ ವಿಕಲಚೇತನ ಮಕ್ಕಳಿಗೆ ವ್ಹೀಲ್ ಚೇರ್, ಆಟಿಕೆ ಸಾಮಾನು, ಹಣ್ಣು ಹಾಗೂ ಧಾನ್ಯದ ಕಿಟ್ ಮತ್ತು ವಿಕಲಚೇತನ ಮಗುವಿಗೆ ಆರ್ಥಿಕ ಸಹಾಯ ನೀಡಲಾಗಿದೆ.

ವಿಕಲಚೇತನ ಹಾಗೂ ದಿವ್ಯಾಂಗ ಮಕ್ಕಳ ಯೋಗಕ್ಷೇಮ ಹಾಗೂ ಅವರ ಆರೋಗ್ಯ ಮತ್ತು ಸಂರಕ್ಷಣೆಗೆ ಸರ್ಕಾರದೊಂದಿಗೆ ಸರ್ಕಾರೇತರ ಸಂಸ್ಥೆಗಳು ಕೈಜೊಡಿಸಬೇಕು. ಇದರಿಂದ ವಿಕಲಚೇತನರಲ್ಲಿಯೂ ಬದುಕಿನ ಆತ್ಮವಿಶ್ವಾಸ ಮೂಡುತ್ತದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ವಿಶೇಷ ಕಾಳಜಿ ಮತ್ತು ಆತ್ಮವಿಶ್ವಾಸದ ಅಗತ್ಯವಿರುವ ವಿಶೇಷ ಚೇತನ ಹಾಗೂ ದಿವ್ಯಾಂಗ ಮಕ್ಕಳಿಗೆ ಸರ್ಕಾರಕ್ಕಿಂತ ಸಮಾಜದ ಹಾಗೂ ಸಮುದಾಯದ ಬೆಂಬಲ ಅಗತ್ಯವಿದೆ. ವಿಶೇಷ ಚೇತನರಲ್ಲಿ ಸಾಮಾನ್ಯಗಿಂತ ವಿಶೇಷವಾದ ಬುದ್ಧಿವಂತಿಕೆ ಹಾಗೂ ಜ್ಞಾನ ಇರುತ್ತದೆ. ಇದನ್ನು ಗುರುತಿಸಿ, ಪ್ರೋತ್ಸಾಹಿಸುವ ಅಗತ್ಯವಿದೆ ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವರ ಹುಟ್ಟುಹಬ್ಬದ ಹಿನ್ನಲೆಯಲ್ಲಿ ಸರ್ಕಾರೇತರ ಸಂಸ್ಥೆಗಳು ಹಾಗೂ ಇಲಾಖೆಗಳಿಂದ ಸಮಾಜಮುಖಿ ಕಾರ್ಯ ನೆರವೇರುತ್ತಿದೆ. ಜಿಲ್ಲಾ ಪಂಚಾಯತ್‌ಯಿಂದ ಹಾಗೂ ಗ್ರಾಮ ಪಂಚಾಯತಿಗಳಿಂದ ವಿಕಲಚೇತನರ ಅಭಿವೃದ್ಧಿಗಾಗಿ ವಿಶೇಷ ಅನುದಾನಗಳನ್ನು ನೀಡಲಾಗುತ್ತಿದೆ ಎಂದು ಸಿಇಓ ಭುವನೇಶ ಪಾಟೀಲ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಧಾರವಾಡ ತಹಶೀಲ್ದಾರ ಡಾ. ಡಿ.ಎಚ್.ಹೂಗಾರ, ಧಾರವಾಡ ಗ್ರಾಮೀಣ ಮತ್ತು ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಡಿಡಿಪಿಐ ಕಚೇರಿಯ ಡಿವೈಪಿಸಿ ಅಧಿಕಾರಿ ಎಸ್.ಎಮ್.ಹುಡೇದಮನಿ, ಜನಮುಖಿ ಸೇವಾ ಸಂಸ್ಥೆಯ ಬಸವರಾಜ ಮ್ಯಾಗೇರಿ, ದೈಹಿಕ ಶಿಕ್ಷಕ ರವಿಕುಮಾರ ಬಾರಾಟಕೆ ಹಾಗೂ ಸಂತೋಷ ಲಾಡ್ ಫೌಂಡೇಶನ್‌ದ ಡಾ. ಜೆ.ಸಂದೀಪ, ಸಚಿವರ ಆಪ್ತ ಸಹಾಯಕ ಶ್ರೀಕಾಂತ ಗಾಯಕವಾಡ ಸೇರಿದಂತೆ ಇತರರು ಭಾಗವಹಿಸಿದ್ದರು.

**ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹುಟ್ಟು ಹಬ್ಬದ ವಿಶೇಷತೆ:** ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಾರ್ಮಿಕ ಇಲಾಖೆ ಸಚಿವರಾದ ಸಂತೋಷ ಲಾಡ್ ಅವರ 51 ನೇ ಹುಟ್ಟು ಹಬ್ಬವನ್ನು ವಿವಿದ ಇಲಾಖೆಗಳ ಹಾಗೂ ಸಂಘ, ಸಂಸ್ಥೆಗಳ ಸಹಯೋಗದಲ್ಲಿ ಸಂತೋಷ ಲಾಡ್ ಫೌಂಡೇಶನ್‌ದಿಂದ ಇಂದು ವಿಶೇಷವಾಗಿ ಜಿಲ್ಲೆಯಲ್ಲಿ ಆಚರಿಸಲಾಯಿತು.

ಧಾರವಾಡದಲ್ಲಿನ ಸರಕಾರಿ ಶಿಕ್ಷಕಿಯರ ತರಬೇತಿ ಸಂಸ್ಥೆ, ಹುಬ್ಬಳ್ಳಿಯಲ್ಲಿನ ನಿರಾಶ್ರಿತರ ಕಲ್ಯಾಣ ಕೇಂದ್ರ ಮತ್ತು ಕಲಘಟಗಿ ಪಟ್ಟಣದಲ್ಲಿ ವಿಶೇಷ ಚೇತನರಿಗೆ ಹಾಗೂ ನಿರಾಶ್ರಿತರಿಗೆ 20 ವ್ಹೀಲ್ ಚೇರ್, 100 ಪಿಜಿಯೋಥೆರಪಿ ಬಾಲ್, 50 ತೂಕದ ಸಾಧನ ಸೇರಿದಂತೆ ಸುಮಾರು 10 ಲಕ್ಷ ಮೊತ್ತದ ಸಾಧನಗಳನ್ನು ಧಾರವಾಡ ಜಿಲ್ಲೆಯಲ್ಲಿ ವಿತರಿಸಲಾಯಿತು.



# ಸಿಎಂ ಅಮೃತ ನಗರೋತ್ತಾ ಯೋಜನೆಯಡಿ ಅರ್ಜಿ

ಬಾಗಲಕೋಟೆ: ಬಾಗಲಕೋಟೆ ನಗರಸಭೆಯು ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯ ಹಂತ 4 ರಡಿ 2022–23 ರಿಂದ 2025–26ನೇ ಸಾಲಿನವರೆಗೆ ಮಂಜೂರಾತಿಯಾಗಿರುವ ಕ್ರಿಯಾಯೋಜನೆ ಆದೇಶದನ್ವಯ ಕಾಯ್ದಿರಿಸಿದ ಅನುದಾನದಲ್ಲಿ ವಿವಿಧ ವಯಕ್ತಿಕ ಸೌಲಭ್ಯಗಳನ್ನು ಒದಗಿಸಲು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಲ್ಯಾಣಕ್ಕಾಗಿ ಶೇ.24.10 ರಷ್ಟು ಅನುದಾನದಡಿಯಲ್ಲಿ ಬಾಗಲಕೋಟೆ ನಗರಸಭೆ ವ್ಯಾಪ್ತಿಯ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನ ಮಾರ್ಚ 26 ಸಂಜೆ 5 ಗಂಟೆವರೆಗೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ನಗರಸಭೆ ಕಾರ್ಯಾಲಯದ ದೂಸಂ.08354–235501ಗೆ ಸಂಪರ್ಕಿಸುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಕಾರ್ಮಿಕ ಕಾರ್ಯಪಡೆ ಸಮಿತಿ ಸಭೆ



ಹುಬ್ಬಳ್ಳಿ: ಕುಂದಗೋಳ ತಾಲೂಕಿನಾದ್ಯಂತ ಬಾಲ ಹಾಗೂ ಕಿಶೋರ ಕಾರ್ಮಿಕರ ಪತ್ತೆಗಾಗಿ ತಹಶೀಲ್ದಾರ ಅಧ್ಯಕ್ಷತೆಯಲ್ಲಿ ಬಾಲ ಕಾರ್ಮಿಕ ಕಾರ್ಯಪಡೆಯಿಂದ ವಿಶೇಷ ಕಾರ್ಯಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತದೆ. ತಾಲೂಕು ಮತ್ತು ಹೊಬಳಿ, ಗ್ರಾಮ ಮಟ್ಟದಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರುದ್ಧ ಸಾರ್ವಜನಿಕ ಜಾಗೃತಿ ಅಭಿಯಾನವನ್ನು ಆಯೋಜಿಸಲಾಗುವುದು ಎಂದು ಕುಂದಗೋಳ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಜಗದೀಶ ಕಮ್ಮಾರ ಅವರು ಹೇಳಿದರು.

ಅವರು ಕುಂದಗೋಳ ತಾಲೂಕಿನ ತಹಶೀಲ್ದಾರ ಕಛೇರಿ ಸಭಾಂಗಣದಲ್ಲಿ ಜರುಗಿದ ತಾಲೂಕಾ ಬಾಲಕಾರ್ಮಿಕ ಕಾರ್ಯಪಡೆ (ಖಿಛಿಇಜಿಂಡಿಛಿಜ) ಸಮಿತಿ ಸಭೆಯ ಅದ್ಯಕ್ಷತೆ ವಹಿಸಿ, ಮಾತನಾಡಿದರು.

ತಾಲೂಕಿನಲ್ಲಿ ಇರುವ ಅಂಗಡಿ ವಾಣಿಜ್ಯ ಸಂಸ್ಥೆಗಳಲ್ಲಿ ಹಾಗೂ ಬಾರ್ ಮತ್ತು ರೆಸ್ಟೋರೆಂಟ್, ಬೇಕರಿ, ಗ್ಯಾರೇಜ್, ಕಟ್ಟಡ ನಿರ್ಮಾಣ ಕಾಮಗಾರಿ ಸ್ಥಳಗಳಲ್ಲಿ ಮಕ್ಕಳನ್ನು ಪತ್ತೆ ಹಚ್ಚಲು ತಪಾಸಣೆ ಕೈಗೊಳ್ಳಬೇಕೆಂದು ಸೂಚಿಸಿದರು.

ಬಾಲಕಾರ್ಮಿಕರನ್ನು ನೇಮಿಸಿಕೊಂಡಿರುವ ಮಾಲೀಕರಿಗೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿಷೇದ ಮತ್ತು ನಿಯಂತ್ರಣ ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016 ರ ಅಡಿ ದಂಡ ಮತ್ತು ಶಿಕ್ಷೆ ವಿಧಿಸಲು ಕ್ರಮವಹಿಸಬೇಕು. 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ಯೋಗದಲ್ಲಿ ನೇಮಿಸಿಕೊಳ್ಳಬಾರದು. ಹಾಗೂ 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಉಧ್ಯಮದಲ್ಲಿ ಕೆಲಸಕ್ಕೆ ಹಚ್ಚಬಾರದು. ಕಾನೂನು ಮೀರಿ ನೇಮಿಸಿಕೊಂಡದ್ದು ಕಂಡು ಬಂದಲ್ಲಿ ಕಾಯ್ದೆಯಡಿ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಮತ್ತು ರೂ. 20 ರಿಂದ 50 ಸಾವಿರ ಗಳವರೆಗೆ ದಂಡ ಅಥವಾ ಕನಿಷ್ಟ 6 ತಿಂಗಳಿಂದ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಅಧಿಕಾರಿಗಳು ಕ್ರಮವಹಿಸಬೇಕೆಂದು ಅವರು ತಿಳಿಸಿದರು.

ಕುಂದಗೋಳ ಪಟ್ಟಣ ಹಾಗೂ ಹೋಬಳಿ ವ್ಯಾಪ್ತಿಯಲ್ಲಿ ಬರುವ ಅಂಗಡಿ ವಾಣಿಜ್ಯ ಸಂಸ್ಥೆಗಳಲ್ಲಿ ಹಾಗೂ ಬಾರ್ ಮತ್ತು ರೆಸ್ಟೋರೆಂಟ್, ಬೇಕರಿ, ಗ್ಯಾರೇಜ್, ಕಟ್ಟಡ ನಿರ್ಮಾಣ ಕಾಮಗಾರಿ ಮುಂತಾದ ಸಂಸ್ಥೆಗಳಲ್ಲಿ ಕರಪತ್ರ ಹಾಗೂ ಸ್ಟೀಕರ್ಸಗಳನ್ನು ಅಂಗಡಿಗಳ ಗೋಡೆಗಳಿಗೆ ಅಂಟಿಸಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿಷೇದ ಮತ್ತು ನಿಯಂತ್ರಣ ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016 ಕುರಿತು ಜಾಗೃತಿ ಮೂಡಿಸಲು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಹುಬ್ಬಳ್ಳಿ 4ನೇ ವೃತ್ತದ ಹಾಗೂ ಕುಂದಗೋಳ ತಾಲೂಕಿನ ಹಿರಿಯ ಕಾರ್ಮಿಕ ನಿರೀಕ್ಷಕಿ ರಜನಿ ಹಿರೇಮಠ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಭೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಬಸವರಾಜ ಪಂಚಾಕ್ಷರಿಮಠ, ಕುಂದಗೋಳ ಪಟ್ಟಣ ಪಂಚಾಯತ ಸಮುದಾಯ ಸಂಘಟಣಾಧಿಕಾರಿ ಎಮ್ ಬಿ. ಸಬರದ, ಸಮಾಜಕಲ್ಯಾಣ ಇಲಾಖೆಯ ತಾಲೂಕು ಕಚೇರಿ ವ್ಯವಸ್ಥಾಪಕಿ ವಿಜಯಲಕ್ಷ್ಮೀ ಇಂಗಳೆ, ಪೊ?ಲಿಸ ಇಲಾಖೆಯ ಆರಕ್ಷಕ ನಿರೀಕ್ಷಕ ಕೆ. ಎಮ್ ಮಠಪತಿ, ಆರೋಗ್ಯ ಇಲಾಖೆ ವಿರೇಶ ಅಂಗಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ತಾಲೂಕಾ ಮೇಲ್ವಿಚಾರಕಿ ಶಮಶಾದ ಬೇಗಂ ನದಾಫ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಶಂಕರ ಬೊಸಲೆ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ ದೂಡ್ಡಮನಿ ಮತ್ತು ಕಾರ್ಮಿಕ ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

# ಪಿಸ್ತಾ ತಿಂದು, ಕೊಬ್ಬು ನಿರ್ವಹಿಸಿ



ನಮ್ಮಲ್ಲಿ ಹೆಚ್ಚಿನ ಮಂದಿ ಕೊಬ್ಬು ಎಂದಾಕ್ಷಣ ಹೆದರುತ್ತೇವೆ. ಕೊಬ್ಬಿನಾಂಶ ಹೆಚ್ಚಾಗುವುದರಿಂದ ಸಕ್ಕರೆ ಕಾಯಿಲೆ, ಹೃದಯ ಕಾಯಿಲೆ, ರಕ್ತದೊತ್ತಡ ಸೇರಿದಂತೆ ಇನ್ನಿತರ ಆರೋಗ್ಯಸಮಸ್ಯೆಗಳಿಗೆ ಕಾರಣವಾಗು ತ್ತದೆ. ಆದರೆ ಪಿತ್ತ ಉತ್ಪತ್ತಿ ಮಾಡುವ ಈ ಕೊಬ್ಬಿನಾಂಶ ದೇಹದ ನರವ್ಯೂಹಕ್ಕೆ, ಜೀವಕೋಶಗಳ ಆಕಾರಕ್ಕೆ, ಮೆದುಳಿನ ರಕ್ತನಾಳಗಳಿಗೆ ಹೆಚ್ಚು ಅಗತ್ಯವಾಗುತ್ತದೆ.

ಹೆಚ್ಚು ಸಾಂದ್ರತೆಯ ಲಿಪ್ರೋಪ್ರೋಟೀನ್‌ಗಳ ಉತ್ಪತ್ತಿಯಿಂದ ಇಂತಹ ಸಮಸ್ಯೆಗಳು ಉಂಟಾಗಲು ಪ್ರಮುಖ ಕಾರಣ. ಇನ್ನೊಂದು ಕಡೆಯಲ್ಲಿ ಕಡಿಮೆ ಸಾಂದ್ರತೆಯ ಲಿಪ್ರೋಪ್ರೋಟೀನ್‌ಗಳು ಹೃದಯನಾಳಗಳ ಗೋಡೆಗಳಲ್ಲಿ ಶೇಖರಣೆಯಾಗುತ್ತದೆ. ಇದರಿಂದ ಹೃದಯ ಸಂಬಂಧಿಸಿದ ಸಮಸ್ಯೆಗಳು ಉಂಟಾಗುತ್ತದೆ. ಇವೆರಡು ಕೊಬ್ಬಿನಾಂಶಗಳಲ್ಲ ಎಂಬುದನ್ನು ಅರಿತುಕೊಳ್ಳಬೇಕಾಗುತ್ತದೆ.

ಆದರೆ ಇವೇ ಹೃದಯ ಸಂಬಂಧಿ ಸಮಸ್ಯೆಗೆ ಕಾರಣವಾಗುತ್ತವೆ. ಹೃದಯ ಸಂಬಂಧಿಸಿದ ಕಾಯಿಲೆಗಳನ್ನು ತರುವಂತಹ ಆಹಾರ ಪದಾರ್ಥಗಳ ಸೇವನೆಯನ್ನು ಕಡಿಮೆಗೊಳಿಸಿ, ಜೀವನ ಕ್ರಮದಲ್ಲಿ ಕೊಂಚ ಬದಲಾವಣೆಗಳನ್ನು ಮಾಡಿಕೊಳ್ಳಬೇಕು. ಇವುಗಳು ಉತ್ತಮ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಹೆಚ್ಚು ಮುಖ್ಯವಾಗುತ್ತದೆ. ಹೆಚ್ಚು ಬೊಜ್ಜು ಹೊಂದಿರುವವರಿಗೆ ಹೃದಯ ಕಾಯಿಲೆಗಳು ಬರು ವುದು ಸಾಮಾನ್ಯ. ನಿಯಮಿತ ವ್ಯಾಯಾಮ, ಡಯಟ್ ಇತ್ಯಾದಿ ಗಳನ್ನು ಅನುಸರಿಸಿ, ನಿಯಮಿ ತವಾಗಿ ಕೊಬ್ಬಿನಾಂಶವನ್ನು ಪರಿಶೀಲಿಸಬೇಕು.

ಹೆಚು ಕೊಬ್ಬಿನಾಂಶಗಳುಳ್ಳ ಆಹಾರವನ್ನು ತಿನ್ನುವುದನ್ನು ಕಡಿಮೆಗೊಳಿಸಿ. ಉದಾಹರಣೆಗೆ ಪೊಟೇಟೋ ವೇಫರ್ಸ್, ಪ್ಯಾಕೆಟೆಡ್ ತಿನಿಸು ಇತ್ಯಾದಿ ಗೋಧಿ ಬಳಸಿದ ವಸ್ತುಗಳನ್ನು ಕಡಿಮೆ ಮಾಡಬೇಕು. ಅಂತೆಯೇ ಹಾಲು, ತುಪ್ಪಗಂತಹ ಹೆಚು ಸಾಂದ್ರತೆ ಇರುವ ವಸ್ತುಗಳನ್ನು ಬಳಕೆ ಮಾಡಬಾರದು.

ಮತ್ತೊಂದು ಪ್ರಮುಖ ಅಂಶವೆಂದರೆ, ನೀವು ತೆಗೆದುಕೊಳ್ಳುವ ಆಹಾರ ವಸ್ತುಗಳಲ್ಲಿ ಶೇ.೦ಯಷ್ಟು ಕೊಬ್ಬು ಹಾಗೂ ನ್ಯೂಟ್ರಿಶನ್ ಟೇಬಲ್ ಉತ್ತಮವಾಗಿರುವ ಆಹಾರ ವಸ್ತುಗಳನ್ನೇ ಬಳಸುವುದರಿಂದಲೂ ಹೆಚ್ಚು ಪ್ರಯೋಜನಕಾರಿಯಾಗುತ್ತದೆ. ಅಂತೆಯೇ ಟ್ರಾನ್ಸ್ ಫ್ಯಾಟ್ ಸಹ ಶೇ.೦ ಇರುವಂತೆ ನೋಡಿಕೊಳ್ಳಬೇಕು.

ಕೊಬ್ಬಿನಾಂಶವನ್ನು ಹತೋಟಿಯಲ್ಲಿಡಲು ಡಯಟ್ ಸಂದರ್ಭದಲ್ಲಿ ಒಣಹಣ್ಣು ಸೇವಿಸುವುದರಿಂದ ಇನ್ನಷ್ಟು ಹೆಚ್ಚು ಸಹಕಾರಿಯಾಗುತ್ತದೆ. ಭಾರತೀಯ ಮಧುಮೇಹ ಫೌಂಡೇಷನ್ ಹಾಗೂ ನ್ಯಾಷನಲ್ ಡಯಾಬಿಟಿಸ್, ಒಬೆಸಿಟಿ ಹಾಗೂ ಕೊಲೆಸ್ಟ್ರಾಲ್ ಫೌಂಡೇಷನ್ ನಡೆಸಿದ ಇತ್ತೀಚಿನ ಅಧ್ಯಯನದ ಪ್ರಕಾರ, ಪಿಸ್ತಾದಲ್ಲಿ ಕಡಿಮೆ ಪ್ರಮಾಣದಲ್ಲಿ ಗ್ಲೈಸೆಮಿಕ್ ಇಂಡೆಕ್ಸ್ ಇದ್ದು, ನೈಸರ್ಗಿಕವಾಗಿ ಕೊಬ್ಬಿನಾಂಶ ರಹಿತ ತಿನಿಸಾಗಿದೆ.

ಅಂತೆಯೇ ಇವುಗಳಲ್ಲಿ ಹೆಚ್ಚು ರೋಗನಿರೋಧಕ ಶಕ್ತಿಯ ಪ್ರೊಟೀನ್‌ಗಳು ಹಾಗೂ ಫೈಬರ್ ಮತ್ತು ಪ್ರೊಟೀನ್‌ಗಳು ಲಭ್ಯವಾಗುತ್ತದೆ.

ಪಿಸ್ತಾವು ಹೃದಯ ಸಂಬಂಧಿಸಿದ ಕಾಯಿಲೆಗಳ ತೊಂದರೆಗಳಿಗೆ ಹೆಚ್ಚು ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸುತ್ತದೆ. ಇದಲ್ಲದೆ ಹಸಿ ತರಕಾರಿ, ಹಣ್ಣುಗಳನ್ನು ದಿನ ನಿತ್ಯದ ಆಹಾರದಲ್ಲಿ ಬಳಸು ವುದು ಹೆಚ್ಚು ಸೂಕ್ತ. ಇದರೊಂದಿಗೆ ಫ್ಯಾಟಿ ಫಿಶ್, ಸೂರ್ಯಕಾಂತಿ ಬೀಜ ಇತ್ಯಾದಿಗಳು ದೇಹಕ್ಕೆ ಅಗತ್ಯವಾದ ಕೊಬ್ಬಿನಾಂಶವನ್ನು ಹೆಚ್ಚು ಉತ್ಪಾದಿಸುತ್ತದೆ. ಹೆಚ್ಚು ಕೊಬ್ಬಿನಾಂಶದ ಡೈರಿ ಉತ್ಪನ್ನ ಕಡಿಮೆ ಕೊಬ್ಬಿನಾಂಶದ ಉತ್ಪನ್ನವನ್ನಾಗಿ ಬದಲಾಯಿಸಿ.

ದಿನಾಲು ಕನಿಷ್ಠ ೩೦ ನಿಮಿಷಗಳ ಕಾಲ ವ್ಯಾಯಾಮ ಮಾಡುವುದು ಅತ್ಯಂತ ಅವಶ್ಯ. ನಡಿಗೆ, ಈಜು, ಅಥವ ಇಷ್ಟವಾದ ಆಟದಲ್ಲಿ ತೊಡಗುವುದು ಇನ್ನಷ್ಟು ಸಹಾಯಕರ. ಇದಲ್ಲದೆ ಲಿಫ್ಟ್ ಬದಲು ಮೆಟ್ಟಿಲುಗಳನ್ನು ಬಳಸುವುದು ಬದಲಾವಣೆಗೆ ಕಾರಣವಾಗುತ್ತದೆ. ನೆನಪಿಡಿ, ನಿಮ್ಮ ಆರೋಗ್ಯ ನಿಮ್ಮ ಕೈಯಲ್ಲೇ ಇದೆ. ನೀವು ಮಾತ್ರ ಇವನ್ನು ಚೆನ್ನಾಗಿ ನೋಡಿಕೊಳ್ಳಲು ಸಾಧ್ಯ.

# ಎತ್ತರಕ್ಕೇರಿದಂತೆ ಹೃದಯಾಘಾತ



ಈ ಪದ ಕೇಳಿದರೇನೆ ಎದೆ ಜುಮ್ಮೆನ್ನುತ್ತದೆ. ಇಂದು ಎಲ್ಲ ವಯೋಮಾನ ದವರನ್ನೂ ಇದು ಕಾಡುತ್ತಿದೆ. ಆಧುನಿಕ ಜೀವನ ಶೈಲಿಯೇ ಹೃದಯಾಘಾತಕ್ಕೆ ಪ್ರಮುಖ ಕಾರಣ ಎನ್ನಲಾಗುತ್ತದೆ. ವೈದ್ಯಕೀಯ ಕ್ಷೇತ್ರದಲ್ಲಿ ಪ್ರತಿದಿನ ಹೃದಯಾಘಾತದ ಕಾರಣ ಕಂಡುಹಿಡಿಯುವ ಸಂಶೋಧನೆಗಳು ನಡೆಯುತ್ತಲೇ ಇರುತ್ತವೆ.

ನಗರೀಕರಣದ ಭರಾಟೆ ಮನುಷ್ಯನ ಜೀವನದ ಮೇಲೆ ಗಂಭೀರ ಪರಿಣಾಮ ಬೀರಿದೆ. ಅನಿವಾರ್ಯ ಆಯ್ಕೆಯ ನಗರ ಜೀವನ ಆರೋಗ್ಯದ ಮೇಲೆ ನಾನಾ ತೊಂದರೆ ನೀಡುತ್ತಿದೆ. ಕಾಂಕ್ರಿಟ್ ಕಾಡು ಹೆಚ್ಚಿದಂತೆಲ್ಲ ಆರೋಗ್ಯವೂ ಹದಗೆಡುತ್ತಿದೆ. ಇಂತಹುದರ ಬೆನ್ನು ಹತ್ತಿದ ಅಧ್ಯಯನಕಾರರಿಗೆ ಹೊಸ ಅಂಶವೊಂದು ಪತ್ತೆಯಾಗಿದೆ.

ನಗರೀಕರಣದಿಂದಾಗಿ ಎಲ್ಲರಿಗೂ ನೆಲಮಹಡಿ ಯಲ್ಲೇ ಸೂರು ಸಿಗುವುದು ಕಷ್ಟ. ಇದರಿಂದಾಗಿ ಎತ್ತರೆತ್ತರದ ಫ್ಲಾಟ್ ಗಳಲ್ಲಿ ಮನೆ ಖರೀದಿ ಅನಿವಾರ್ಯ. ಮಹಡಿಗಳ ಮೇಲೆ ಮಹಡಿ ಕಟ್ಟಿ ಮನೆ ನೀಡುವವರೂ ಇಂದು ಹೆಚ್ಚಿದ್ದಾರೆ. ಕಡಿಮೆ ಬೆಲೆಗೆ ಮನೆ ಬೇಕೆಂದರೆ ಕೊನೆಯ ಮಹಡಿಗೆ ಬನ್ನಿ ಎಂಬ ಪುಕ್ಕಟೆ ಸಲಹೆಯೂ ಸಿಗುತ್ತದೆ. ಆದರೆ ಎತ್ತರಕ್ಕೇರಿದಂತೆ ಹೃದಯಾಘಾತದಿಂದ ಬದುಕಿ ಉಳಿಯುವ ಪ್ರಮಾಣವೂ ಕಡಿಮೆ ಎನ್ನುತ್ತದೆ ಅಧ್ಯಯನ.

೨೦೦೭ ರಿಂದ ೨೦೧೨ ರ ನಡುವೆ ಕೆನಡಾದ ಸಂಶೋಧಕರು ಹೃದಯಾಘಾತದಿಂದ ತೊಂದರೆಗೊಳಗಾದವರ ಅಧ್ಯಯನ ನಡೆಸಿದ್ದಾರೆ. ಟೊರಾಂಟೊ ಸುತ್ತಲಿನ ಖಾಸಗಿ ನಿವಾಸಗಳಿಂದ ಹೃದಯಾಘಾತ ಸಂಬಂಧ ೭,೮೪೨ ಕರೆಗಳನ್ನು ಸಂಶೋಧಕರು ಸ್ವೀಕರಿ ಸಿದ್ದರು. ಹೃದಯಾಘಾತಕ್ಕೆ ಒಳಗಾದ ಮೂರನೇ ಮಹಡಿಯ ಕೆಳಗೆ ವಾಸಿಸುವ ಶೇ ೪.೨ ರಷ್ಟು ವ್ಯಕ್ತಿಗಳು ಆಸ್ಪತ್ರೆಯಿಂದ ಕೆಲವೇ ದಿನಗಳಲ್ಲಿ ಬಿಡುಗಡೆಯಾದರು. ಎತ್ತರದ ಮಹಡಿಗಳಲ್ಲಿ ವಾಸಿಸಿ ಹೃದಯಾಘಾತಕ್ಕೆ ಒಳಗಾಗಿ ಬಿಡುಗಡೆಯಾದವರ ಪ್ರಮಾಣ ಶೇ ೨.೬ ರಷ್ಟಿತ್ತು. ೧೬ ನೇ ಮಹಡಿಯಲ್ಲಿ ವಾಸಿಸುತ್ತಿದ್ದವರಲ್ಲಿ ಶೇ ೦.೯ ರಷ್ಟು ಮಂದಿ ಮಾತ್ರ ಬದುಕಿದ್ದರು. ೨೫ ನೇ ಮಹಡಿಯಿಂದ ಎತ್ತರದಲ್ಲಿ ವಾಸವಿದ್ದ ೩೦ ಹೃದಯಾಘಾತದ ರೋಗಿಗಳು ಬದುಕಿಯೇ ಇರಲಿಲ್ಲ.

ಈ ಅಧ್ಯಯನ ವಿವರಗಳು ಅಚಿಟಿಚಿಜಚಿಟಿ ಒಜಜಿ- ಛಿಚಿಟ ಎಡಿಪಿಟಿಚಿಟ ನಲ್ಲಿ ಪ್ರಕಟವಾಗಿವೆ.

ಎತ್ತರದ ಮಹಡಿಗಳಲ್ಲಿ ವಾಸವಿ ರುವವರು ಆಸ್ಪತ್ರೆಯ ಚಿಕಿತ್ಸೆಗೆ ಸಕಾಲದಲ್ಲಿ ಲಭ್ಯವಾಗುವುದು ಕಷ್ಟವಾಗುತ್ತದೆ. ಹೃದಯಾಘಾತವಾದವರಿಗೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಬೇಕು. ಇದರಿಂದ ಅವರ ಜೀವತಾವಧಿ ಹೆಚ್ಚಿಸಬಹುದು ಎನ್ನುತ್ತಾರೆ ಟೊರಾಂಟೊದ ಸೇಂಟ್ ಮೈಕೆಲ್ ಆಸ್ಪತ್ರೆಯ ವೈದ್ಯ ಇಯಾನ್ ಆರ್.ಡ್ರೆನ್ನರ್.

ಯಾವುದೇ ನಿವಾಸಗಳಿಂದ ವ್ಯಕ್ತಿ ಯೊಬ್ಬರಿಗೆ ಹೃದಯಾಘಾತವಾಗಿರುವ ಬಗ್ಗೆ ಕರೆ ಬಂದಾಗ ಅಲ್ಲಿಗೇ ಧಾವಿಸುವ ವೈದ್ಯಕೀಯ ಸಿಬ್ಬಂದಿಗೆ ಪ್ರವೇಶದ್ವಾರ ತೆರೆಸುವುದೇ ಸವಾಲಾಗುತ್ತಿದೆ. ಕೆಟ್ಟು ನಿಂತ ಎಲಿವೇಟರ್‌ಗಳು, ಲಿಫ್ಟ್‌ಗಳು ಇತ್ಯಾದಿ ಕಾರಣಗಳು ರೋಗಿಯನ್ನು ಇನ್ನಷ್ಟು ದುರ್ಬಲಗೊಳಿಸುತ್ತವೆ ಎಂಬ ವಿವರವನ್ನು ಇಯಾನ್ ನೀಡುತ್ತಾರೆ.

# ಡಿಜಿಟಲ್ ಸಾಕ್ಷರತೆ ಇಂದಿನ ಅನಿವಾರ್ಯತೆ: ಪ್ರಾಂಶುಪಾಲ ಡಾ. ಎಸ್.ಎಲ್. ಪಾಟೀಲ ಅಭಿಮತ

## ಪಟ್ಟಣದ ಆಲಮಟ್ಟಿ ರಸ್ತೆ ಹಡಲಗೇರಿ ವಾರದ ಕಾಲೇಜಿನಲ್ಲಿ 'ಡಿಜಿಟಲ್ ಕೌಶಲ' ಕಾರ್ಯಾಗಾರಕ್ಕೆ ಚಾಲನೆ



ಮುದ್ದೇಬಿಹಾಳ: "ಇಂದಿನ ವೇಗದ ಜಗತ್ತಿನಲ್ಲಿ ತಂತ್ರಜ್ಞಾನವು ಪ್ರತಿಯೊಬ್ಬರಿಗೂ ಅತ್ಯಗತ್ಯವಾಗಿದ್ದು, ವೃತ್ತಿ ಜೀವನದಲ್ಲಿ ಹೊಸ ಅವಕಾಶಗಳ ಹಾದಿ ತೆರೆಯಲು ಡಿಜಿಟಲ್ ಕೌಶಲಗಳು ಅನಿವಾರ್ಯವಾಗಿವೆ," ಎಂದು ಮುದ್ದೇಬಿಹಾಳದ ಹಡಲಗೇರಿ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಸ್.ಎಲ್. ಪಾಟೀಲ ಹೇಳಿದರು.

ಪಟ್ಟಣದ ಆಲಮಟ್ಟಿ ರಸ್ತೆಯ ಹಡಲಗೇರಿ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಮೂರು ದಿನಗಳ "ಡಿಜಿಟಲ್ ಮತ್ತು ಉದ್ಯೋಗಾಧಾರಿತ ಕೌಶಲಗಳು" ವಿಷಯದ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ಡಿಜಿಟಲ್ ಜ್ಞಾನದಿಂದ ವಂಚನೆಗೆ ತಡೆ:** ಮುಂದುವರಿದು ಮಾತನಾಡಿದ ಅವರು, "ಈಗಿನ ಎಲ್ಲ ಉದ್ಯೋಗಗಳಿಗೂ ಕನಿಷ್ಠ ಕಂಪ್ಯೂಟರ್ ಜ್ಞಾನ ಬೇಕೇ ಬೇಕು. ಇಂಟರ್ನೆಟ್ ಹಾಗೂ ಡಿಜಿಟಲ್ ಕೌಶಲಗಳನ್ನು ಬಳಸಿಕೊಂಡರೆ ಬ್ಯಾಂಕಿಂಗ್, ಶಾಪಿಂಗ್ ಹಾಗೂ ಸರ್ಕಾರಿ ಸೇವೆಗಳನ್ನು ಮನೆಯಲ್ಲಿಯೇ ಕುಳಿತು ಪಡೆಯಬಹುದು. ಅದರಲ್ಲೂ ಮುಖ್ಯವಾಗಿ ಕೃತಕ ಬುದ್ಧಿಮತ್ತೆ (AI) ಮತ್ತು ಚಾಟ್‌ಜಿಪಿಟಿಯಂತಹ ಹೊಸ ತಂತ್ರಜ್ಞಾನಗಳ ಬಗ್ಗೆ ಜ್ಞಾನ ಹೊಂದುವುದು ಇಂದಿನ ಅಗತ್ಯವಾಗಿದೆ. ಆನ್‌ಲೈನ್ ವಂಚನೆಗಳಿಂದ ಪಾರಾಗಲು ಪ್ರತಿಯೊಬ್ಬರಿಗೂ ಡಿಜಿಟಲ್ ಸಾಕ್ಷರತೆ ಅತಿ ಅವಶ್ಯ," ಎಂದು ಅಭಿಪ್ರಾಯಪಟ್ಟರು.

**ಉದ್ಯೋಗಕ್ಕೆ ಕೌಶಲವೇ ಆಧಾರ:** ಕಾರ್ಯಕ್ರಮದ ಸಂಚಾಲಕರಾದ ಡಾ. ಮಹೇಶ್ವರಿ ಎಸ್. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, "ಇಂದಿನ ಉದ್ಯೋಗ ಅವಕಾಶಗಳು ಬಹುತೇಕ ತಂತ್ರಜ್ಞಾನ ಮತ್ತು ವೃತ್ತಿಪರ ಕೌಶಲಗಳನ್ನು ಅವಲಂಬಿಸಿವೆ. ಜಗತ್ತಿನ ಯಾವುದೇ ಮೂಲೆಯ ಮಾಹಿತಿ ಪಡೆಯಲು ಡಿಜಿಟಲ್ ಆ್ಯಪ್‌ಗಳು ಲಭ್ಯವಿದ್ದು, ಅವುಗಳ ಸಮರ್ಪಕ ಬಳಕೆಗೆ ಇಂತಹ ಕಾರ್ಯಾಗಾರಗಳು ಸಹಕಾರಿ," ಎಂದರು.

ಈ ಕಾರ್ಯಕ್ರಮದ ವೇದಿಕೆಯ ಮೇಲೆ ಸಂಪನ್ಮೂಲ ವ್ಯಕ್ತಿಗಳಾಗಿ ಪ್ರಾಧ್ಯಾಪಕರಾದ ಶ್ರೀಮತಿ ನಮ್ರತಾ ಪಾಟೀಲ, ಶ್ರೀಮತಿ ನೇತ್ರಾವತಿ ನಾಲತವಾಡ ಹಾಗೂ ಐಕಿಂಅ ಸಂಯೋಜಕರಾದ ಡಾ. ಅನಿಲಕುಮಾರ ಡಿಗ್ಗೆ ಉಪಸ್ಥಿತರಿದ್ದರು.

ಕಾಲೇಜಿನ ಸಾಂಸ್ಕೃತಿಕ ವಿಭಾಗದ ಸಂಯೋಜಕ ಡಾ. ರೇವಣಸಿದ್ದಪ್ಪ ಅಮ್ಮಣಿ ಕಾರ್ಯಕ್ರಮ ನಿರ್ವಹಿಸಿದರು. ಬಿಸಿಎ ವಿದ್ಯಾರ್ಥಿನಿ ಕುಮಾರಿ ಅದಿತಿ ಪವಾರ್ ಸ್ವಾಗತಿಸಿದರು, ಡಾ. ಅನಿಲಕುಮಾರ ಡಿಗ್ಗೆ ವಂದಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಹೋಳಿ ಹುಣ್ಣಿಮೆ: ಸಭೆ



ಹುಬ್ಬಳ್ಳಿ: ನಗರದ ದಾಜಿಬಾನ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ದೇವಸ್ಥಾನದ ಸಭಾಂಗಣದಲ್ಲಿ ,ಹೋಳಿ ಹುಣ್ಣಿಮೆ ನಿಮಿತ್ಯ ಶ್ರೀ ರತಿದೇವಿ ಶ್ರೀ ಕಾಮದೇವರ ಮೂರ್ತಿಗಳ ಪ್ರತಿಷ್ಠಾಪನೆ ವಿಷಯವಾಗಿ ಕರೆದ ಸಭೆಯು, ಎಸ್ ಎಸ್ ಕೆ ಪಂಚ ಟ್ರಸ್ಟ್ , ಶ್ರೀ ದುರ್ಗಾದೇವಿ ದೇವಸ್ಥಾನ , ದಾಜಿಬಾನ ಪೇಟ , ಹುಬ್ಬಳ್ಳಿ ಸಂಸ್ಥೆಯ ಜಾಯಿಂಟ್ ಚೀಫ್ ಟ್ರಸ್ಟಿ ನೀಲಕಂಠ ಪಿ. ಜಡಿ ಇವರ ಅಧ್ಯಕ್ಷತೆಯಲ್ಲಿ ಜರುಗಿತು.

ಎಸ್ ಎಸ್ ಕೆ ಪಂಚ ಟ್ರಸ್ಟ್ ಶ್ರೀ ದುರ್ಗಾದೇವಿ ದೇವಸ್ಥಾನ, ದಾಜಿಬಾನ ಪೇಟ್ ಹುಬ್ಬಳ್ಳಿ ಇದರ ಗೌರವ ಕಾರ್ಯದರ್ಶಿ ಭಾಸ್ಕರ ಎನ್. ಜಿತೂರಿ ಇವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಜ್ಯೋತಿಷಿಗಳಾದ ಪ್ರವೀಣ ಬದ್ದಿ ಇವರು ಮಾತನಾಡಿ,ಚಂದ್ರ ಗ್ರಹಣದ ವೇದವು ಪ್ರಾರಂಭವಾಗುವ ಪೂರ್ವ ಮುಂಜಾನೆ 6 ಗಂಟೆ 50 ನಿಮಿಷದೊಳಗೆ ಹಾಗೂ ಚಂದ್ರ ಗ್ರಹಣ ಮುಗಿದ ನಂತರ ಸಾಯಂಕಾಲ 6 ಗಂಟೆ 48 ನಿಮಿಷದ ನಂತರ ಶ್ರೀ ರತಿದೇವಿ ಶ್ರೀ ಕಾಮದೇವರ ಮೂರ್ತಿಗಳನ್ನು ಪ್ರತಿಷ್ಠಾಪಿಸಬೇಕೆಂದು ಪಂಚಾಂಗದ ವಿವರವನ್ನು ಸಭೆಗೆ ತಿಳಿಹೇಳಿದರು.

ಎಸ್‌ಎಂ ಮೆಹರವಾಡೆ, ಬಸವರಾಜ ಕುಂದಗೋಳ, ಎನ್. ಆರ್. ಹಬೀಬ, ನಾರಾಯಣ್ ಸಿಂಧೆ, ನಿಂಗಪ್ಪ ಉಪ್ಪಾರ್, ಭರತ ಊಟವಾಲೆ, ಮಂಜುನಾಥ ಪವಾರ, ಪ್ರಕಾಶ ಬುರುಬುರೆ ಉಪಸ್ಥಿತರಿದ್ದರು.

# ದೇವಸ್ಥಾನದ ಮುಂದೆ ಭಕ್ತರು ಸಾಲಾಗಿ ನಿಲ್ಲುವಂತೆ, ಗ್ರಂಥಾಲಯಗಳ ಮುಂದೆ ಓದುಗರು ಸಾಲಾಗಿ ನಿಲ್ಲುವಂತಾಗಬೇಕು: ತಾಪಂ ಇಒ ವೆಂಕಟೇಶ್ ವಂದಾಲ

ಮುದ್ದೇಬಿಹಾಳ: "ಪ್ರತಿಯೊಂದು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಗ್ರಂಥಾಲಯಗಳು ಜ್ಞಾನದ ದೇಗುಲಗಳಿದ್ದಂತೆ. ದೇವಸ್ಥಾನದ ಮುಂದೆ ಭಕ್ತರು ಸಾಲಾಗಿ ನಿಲ್ಲುವಂತೆ, ಗ್ರಂಥಾಲಯಗಳ ಮುಂದೆ ಓದುಗರು ಸಾಲಾಗಿ ನಿಲ್ಲುವಂತಾಗಬೇಕು," ಎಂದು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ (ಇಒ) ವೆಂಕಟೇಶ್ ವಂದಾಲ ಹೇಳಿದರು.

ಪಟ್ಟಣದ ತಾಲೂಕು ಪಂಚಾಯತ ಸಭಾಭವನದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ತಾಲ್ಲೂಕಿನ ಎಲ್ಲಾ ಗ್ರಂಥಾಲಯ ಮೇಲ್ವಿಚಾರಕರ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಿಜಿಟಲ್ ಕ್ರಾಂತಿ ಮತ್ತು ಗ್ರಂಥಾಲಯದ ಮಹತ್ವ

ಮುಂದುವರಿದು ಮಾತನಾಡಿದ ಅವರು, ಈ ಗ್ರಂಥಾಲಯ ಕಟ್ಟಡ ಸ್ಮಾರ್ಟ್ ಫೋನ್, ಕಂಪ್ಯೂಟರ್ ಸೇವೆ ಕಲ್ಪಿಸಲಾಗಿದೆ,

ಈಗಿನ ಸ್ಮಾರ್ಟ್ ಫೋನ್ ಮತ್ತು ಕಂಪ್ಯೂಟರ್ ಯುಗದಲ್ಲಿ ಮಕ್ಕಳನ್ನು ಪುಸ್ತಕ ಓದುವತ್ತ ಸೆಳೆಯುವುದು ಮುಖ್ಯವಾಗಿದೆ. ಬೇಸಿಗೆ ರಜೆ ಹತ್ತಿರ ಬರುತ್ತಿದ್ದು, ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಗ್ರಂಥಾಲಯಕ್ಕೆ ಬರುವಂತೆ ಮೇಲ್ವಿಚಾರಕರು ಕ್ರಮ ವಹಿಸಬೇಕು. ಕವಡಿಮಟ್ಟಿ ಮತ್ತು ಹಿರೇಮುರಾಳ ಗ್ರಾಮಗಳ ಡಿಜಿಟಲ್ ಗ್ರಂಥಾಲಯಗಳು ಅತ್ಯಂತ ಸುಂದರವಾದ ಕಟ್ಟಡಗಳನ್ನು ಹೊಂದಿದ್ದು, ಮಾದರಿಯಾಗಿವೆ. ಗ್ರಂಥಾಲಯ ಕೇಂದ್ರಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು," ಎಂದರು. ಅಲ್ಲದೆ, ಗ್ರಂಥಾಲಯದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಗುತ್ತಿಗೆದಾರ ಮಂಜುನಾಥ ಬೆಳ್ಳಿಕಟ್ಟಿ ಅವರ ಕಾರ್ಯವನ್ನು ಶ್ಲಾಘಿಸಿದರು.

ಈ ವೇಳೆ ಕವಡಿಮಟ್ಟಿ ಗ್ರಾಪಂ ಪಿಡಿಒ ಕೆ.ಎಚ್. ಕುಂಬಾರ ಮಾತನಾಡಿ, "ಹಿಂದಿನ ಪಿಡಿಒ ಕೆ.ಎಸ್. ಕಸನಕ್ಕಿ ಅವರ ಪರಿಶ್ರಮ ಹಾಗೂ ಹಿರೇಮುರಾಳ ಗ್ರಾಪಂ ಸಿಬ್ಬಂದಿಗಳ,ಪ್ರೋತ್ಸಾಹದಿಂದ ಲಭ್ಯವಿರುವ ಜಾಗದಲ್ಲಿ ಸುಸಜ್ಜಿತ ಗ್ರಂಥಾಲಯ ಕಟ್ಟಡ ನಿರ್ಮಿಸಲಾಗಿದೆ. ಬಡವರ ಮಕ್ಕಳಿಗೆ ಓದಲು ಅನುಕೂಲವಾಗುವಂತೆ ಎಲ್ಲಾ ಸೌಲಭ್ಯಗಳನ್ನು ಒದಗಿಸಿದ್ದೇವೆ," ಎಂದು ತಿಳಿಸಿದರು.



**ಗೌರವ ಸನ್ಮಾನ:** ಇದೇ ಸಂದರ್ಭದಲ್ಲಿ ತಾಪಂ ಇಒ ವೆಂಕಟೇಶ್ ವಂದಾಲ, ಪಿಡಿಒ ಕೆ.ಎಚ್. ಕುಂಬಾರ, ಹಿರೇಮುರಾಳ ಆರ್.ಎ. ಎಕ್ಸಂಬೆ, ಕಾರ್ಯದರ್ಶಿ ನಿಂಗಣ್ಣ ಬಿರಾದಾರ ಹಾಗೂ ಗುತ್ತಿಗೆದಾರ ಮಂಜುನಾಥ ಬೆಳ್ಳಿಕಟ್ಟಿ ಅವರಿಗೆ ಮುದ್ದೇಬಿಹಾಳ ತಾಲ್ಲೂಕಿನ ಅರಿವು ಕೇಂದ್ರದ ಎಲ್ಲಾ ಮೇಲ್ವಿಚಾರಕರು ಹಾಗೂ ಹಿರೇಮುರಾಳ ಗ್ರಂಥಾಲಯ ಮೇಲ್ವಿಚಾರಕ ವಿರೇಶ ಬಾಗೇವಾಡಿ ವತಿಯಿಂದ ಎಲ್ಲರಿಗೂ ಗೌರವ ಸನ್ಮಾನ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ತರಬೇತುದಾರ ಚಂದ್ರು ಕಲಾಲ, ಗ್ರಂಥಾಲಯ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಮಹಾಂತೇಶ ಕಾಶಿನಕುಂಟಿ, ತಾಲ್ಲೂಕು ಅಧ್ಯಕ್ಷ ಬಿ.ಕೆ. ಸಗರಿ, ಉಪಾಧ್ಯಕ್ಷೆ ಈರಮ್ಮ ಕೊಪ್ಪರ, ಕಾರ್ಯದರ್ಶಿ ಸುನಿಲ್ ದೊಡ್ಡಮನಿ, ನಾನಗೌಡ ಪಾಟೀಲ, ಬಸನಗೌಡ ಪಾಟೀಲ ಸೇರಿದಂತೆ ತಾಲ್ಲೂಕಿನ ಎಲ್ಲಾ ಗ್ರಂಥಾಲಯ ಮೇಲ್ವಿಚಾರಕರು ಉಪಸ್ಥಿತರಿದ್ದರು.

# ರಾಜು ನರೇಗಲ್ ಇವರಿಗೆ ಪಿಎಚ್.ಡಿ ಪದವಿ ಪ್ರಧಾನ



ಧಾರವಾಡ: ಹಂಪಿ ಕನ್ನಡ ವಿಶ್ವವಿದ್ಯಾಲಯದ ಚರಿತ್ರೆ ವಿಭಾಗದಲ್ಲಿ ರಾಜು ನರೇಗಲ್‌ಇವರು "ಸವದತ್ತಿ ಪರಿಸರ ಹಾಗೂ ಎಲ್ಲಮ್ಮ :ಚಾರಿತ್ರಿಕ ಅಧ್ಯಯನ" ಎಂಬ ವಿಷಯದ ಕುರಿತು ಡಾ.ಎಚ್. ಇ. ಬಸವರಾಜಪ್ಪ ಇವರ ಮಾರ್ಗದರ್ಶನದಲ್ಲಿ ಸಂಶೋಧನೆ ಪೂರೈಸಿದ್ದು,

ಇವರಿಗೆ ಕನ್ನಡ ವಿಶ್ವವಿದ್ಯಾಲಯವು ದಿನಾಂಕ. 24.02.2026 ವಿಶ್ವವಿದ್ಯಾಲಯದ 34ನೇ ಘಟಿಕೋತ್ಸವ ದಿನದಂದು ಪಿಎಚ್.ಡಿ ಪದವಿ ಪ್ರಧಾನ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಬಡವರ ಪಾಲಿನ ಆಶಾಕಿರಣ : ಜನತಾ ದರ್ಶನ



ಗದಗ: ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ ಅವರ ನೇತೃತ್ವದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವು ಜನಸಾಮಾನ್ಯರ ಪಾಲಿಗೆ ನಿಜವಾದ ಆಶಾಕಿರಣವಾಗಿ ಪರಿಣಮಿಸಿತು. ಜಿಲ್ಲೆಯ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ನೇರವಾಗಿ ಸಚಿವರು ಹಾಗೂ ಅಧಿಕಾರಿಗಳ ಮುಂದಿಡುವ ಮೂಲಕ ತ್ವರಿತ ಪರಿಹಾರ ಕೋರಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಿರಹಟ್ಟಿ ತಾಲೂಕಿನ ವಡವಿ ಹೊಸೂರು ಗ್ರಾಮದ ಪ್ರಭುಗೌಡ ಪಾಟೀಲ್, ತಮ್ಮ ಹೊಲದ ಬೋರವೇಲ್ಗೆ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಅಹವಾಲು ಸಲ್ಲಿಸಿ, ಜನತಾ ದರ್ಶನ ಕಾರ್ಯಕ್ರಮದಿಂದ ಬಡವರಿಗೆ ಮತ್ತು ರೈತರಿಗೆ ಬಹಳ ಅನುಕೂಲವಾಗಿದೆ. ಸರ್ಕಾರದ ದಿಟ್ಟ ಹೆಜ್ಜೆಯಿಂದ ಸಾಮಾನ್ಯರಿಗೆ ನ್ಯಾಯ ಸಿಗುವ ವೇದಿಕೆ ಸಿಕ್ಕಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಅದೇ ಗ್ರಾಮದ ನರಸಿಂಹಗೌಡ ಪಾಟೀಲರು ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಗ್ರೂಪ್–ಡಿ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನೀಡುವಂತೆ ಅರ್ಜಿ ಸಲ್ಲಿಸಿ, ಜನತಾ ದರ್ಶನದ ಮೂಲಕ ಅಧಿಕಾರಿಗಳು ಜನರ ಸಮಸ್ಯೆಗಳನ್ನು ಕೇಳಿ ತ್ವರಿತವಾಗಿ ಸ್ಪಂದಿಸುತ್ತಿದ್ದಾರೆ. ಇದರಿಂದ ಸಾರ್ವಜನಿಕರಿಗೆ ನೇರ ಪರಿಹಾರ ದೊರೆಯುತ್ತಿದೆ ಎಂದರು.

ಮುಂಡರಗಿ ತಾಲೂಕಿನ ಕದಾಂಪುರ ಗ್ರಾಮದ ಬಸವರೆಡ್ಡಿ ಕೆ. ನಾಗನೂರು ಅವರು ತಮ್ಮ ಜಮೀನಿನಲ್ಲಿ ನೀರಿನ ಪೂರೈಕೆಯಿಂದ ಸುತ್ತಮುತ್ತಲಿನ ರೈತರಿಗೆ ಉಂಟಾಗಿರುವ ತೊಂದರೆ ಪರಿಹರಿಸಲು 25 ಮೋಲ್ಟ್ ಸಾಮರ್ಥ್ಯದ ಟ್ರಾನ್ಸಾ ??ರ್ಮರ್ ಅನ್ನು 63 ವೋಲ್ಟ್ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಮನವಿ ಮಾಡಿದರು. ?ರೈತರ ಸಮಸ್ಯೆಗಳಿಗೆ ಇಂತಹ ಕಾರ್ಯಕ್ರಮಗಳು ಸ್ಫೂರ್ತಿಯಾಗುತ್ತವೆ. ಕುಂದುಕೊರತೆಗಳನ್ನು ಬಗೆಹರಿಸಿದರೆ ಗ್ರಾಮೀಣ ಜನರಿಗೆ ಹೆಚ್ಚು ಪ್ರಯೋಜನವಾಗುತ್ತದೆ ಎಂದು ಹೇಳಿದರು.

ಮುಂಡರಗಿ ತಾಲೂಕಿನ ಹೆಸರೂರು ಗ್ರಾಮದ ಮಂಜುನಾಥಯ್ಯ ಹಳ್ಳಿ ಅವರು ಭೂಸ್ವಾಧೀನ ಕುರಿತ ಅಹವಾಲು ಸಲ್ಲಿಸಿ, ಜನತಾ ದರ್ಶನ ಕಾರ್ಯಕ್ರಮದಿಂದ ಜನಸಾಮಾನ್ಯರಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಇಂತಹ ಕಾರ್ಯಕ್ರಮಗಳು ತಾಲೂಕು ಮಟ್ಟದಲ್ಲಿಯೂ ನಡೆಯಬೇಕು ಎಂದು ಸಲಹೆ ನೀಡಿದರು.

ಗಜೇಂದ್ರಗಡ ತಾಲೂಕಿನ ನಾಗರಸಕೊಪ್ಪದ ಗ್ರಾಮದ ಶರಣು ಎಸ್. ಸೊಬರದ ಅವರು ಕೇಂದ್ರೀಯ ವಿದ್ಯಾಲಯ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮನವಿ ಸಲ್ಲಿಸಿ, ಜನತಾ ದರ್ಶನ ಜನರ ಅಹವಾಲುಗಳಿಗೆ ಸ್ಪಂದಿಸುವ ಪರಿಣಾಮಕಾರಿ ವೇದಿಕೆಯಾಗಲಿ? ಎಂದು ಆಶಿಸಿದರು.

ಅದೇ ಗ್ರಾಮದ ಭಾಗ್ಯಶ್ರೀ ಅಂಗಡಿ ಅವರು ಗೃಹಲಕ್ಷ್ಮಿ ?? ಯೋಜನೆಯ ಹಣ ಜಮೆಯಾಗದಿರುವ ಕುರಿತು ಅಹವಾಲು ನೀಡಿ ತ್ವರಿತ ಪರಿಹಾರ ಕೋರಿದರು.

ಲಕ್ಷ್ಮೇ ??ೀಶ್ವರ ತಾಲೂಕಿನ ಬಾಲೆಹೊಸೂರು ಗ್ರಾಮದ ಮಲ್ಲಿಕಾರ್ಜುನ ವಿ. ದೊಡ್ಡಮನಿ ಅವರು ರೇಷ್ಮೆ ಇಲಾಖೆಯಿಂದ ರೈತರಿಗೆ ಸಹಾಯಧನ ಒದಗಿಸುವಂತೆ ಮನವಿ ಸಲ್ಲಿಸಿದರೆ, ರೋಣ ಗ್ರಾಮದ ಮೆಹಬೂಬ್ ಬಾಬು ಸಾಬ್ ಅವರು ಪಡಿತರ ಚೀಟಿಯಲ್ಲಿ ನೌಕರರ ಹೆಸರು ಇರುವ ಕಾರಣ ವಿಧಿಸಲಾದ 86,000 ದಂಡ ರದ್ದುಪಡಿಸುವಂತೆ ಕೋರಿದರು.

ಎಲ್ಲಾ ಅಹವಾಲುಗಳನ್ನು ಸಮಾಧಾನದಿಂದ ಆಲಿಸಿದ ಸಚಿವ ಎಚ್ ಕೆ ಪಾಟೀಲ ಅವರು ಸಂಬಂಧಿತ ಅಧಿಕಾರಿಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚಿಸಿ, ತ್ವರಿತ ಪರಿಹಾರ ಒದಗಿಸುವ ಭರವಸೆ ನೀಡಿದರು.

ಒಟ್ಟಾರೆ, ಜನತಾ ದರ್ಶನ ಕಾರ್ಯಕ್ರಮವು ಜನಸಾಮಾನ್ಯರ ಸಮಸ್ಯೆಗಳಿಗೆ ನೇರ ಸ್ಪಂದನೆ ದೊರಕಿಸುವ ವೇದಿಕೆಯಾಗಿ ರೂಪುಗೊಂಡಿದ್ದು, ಬಡವರು ಮತ್ತು ರೈತರ ಪಾಲಿಗೆ ಆಶಾಕಿರಣವಾಗಿ ಪರಿಣಮಿಸಿದೆ ಎಂಬ ಅಭಿಪ್ರಾಯ ಸಾರ್ವಜನಿಕರಿಂದ ವ್ಯಕ್ತವಾಯಿತು.



ಗದಗ : ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಶುಕ್ರವಾರ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ವಿಕಲಚೇತನರಿಗೆ ತ್ರಿಚಕ್ರ ವಾಹನ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ವಿಕಲಚೇತನರ ಕಲ್ಯಾಣ ಇಲಾಖೆ ಅಧಿಕಾರಿ ಮಹಾಂತೇಶ ಕೆ , ಗಣ್ಯರಾದ ಎಸ್.ಎನ್.ಬಳ್ಳಾರಿ, ಸುಜಾತಾ ದೊಡಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.



ಗದಗ : ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಶುಕ್ರವಾರ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ಆದೇಶದ ಪ್ರತಿಗಳನ್ನು ಫಲಾನುಭವಿಗಳಿಗೆ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕೆ, ಅಪರ ಜಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಗಣ್ಯರಾದ ಸಿದ್ದು ಪಾಟೀಲ, ಎಸ್.ಎನ್.ಬಳ್ಳಾರಿ, ಸುಜಾತಾ ದೊಡಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು

# ಹುಬ್ಬಳ್ಳಿಯಿಂದ ಮುಂಬೈಗೆ ಏಕಮುಖ ವಿಶೇಷ ರೈಲು ಸಂಚಾರ

ಹುಬ್ಬಳ್ಳಿ : ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಯಂತ್ರಿಸಲು, ನೈಋತ್ಯ ರೈಲ್ವೆಯು ಮಾರ್ಚ್ 01 ರಿಂದ ( ಭಾನುವಾರದಂದು) ಶ್ರೀ ಸಿದ್ಧಾರೂಢ ಸ್ವಾಮೀಜಿ (ಎಸ್‌ಎಸ್‌ಎಸ್) ಹುಬ್ಬಳ್ಳಿ ನಿಲ್ದಾಣದಿಂದ ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಸ್ (CSMT) ವರೆಗೆ ಏಕಮುಖ ಕಾಯ್ದಿರಿಸದ (Unreserved) ವಿಶೇಷ ಎಕ್ಸ್‌ಪ್ರೆಸ್ ರೈಲನ್ನು ಓಡಿಸಲಿದೆ.

ಎಸ್‌ಎಸ್‌ಎಸ್ ಹುಬ್ಬಳ್ಳಿ – ಸಿಎಸ್‌ಎಂಟಿ ಮುಂಬೈ ಏಕಮುಖ ವಿಶೇಷ ಎಕ್ಸ್‌ಪ್ರೆಸ್ ರೈಲು (ರೈಲು ಸಂಖ್ಯೆ –□ 07344) ಭಾನುವಾರ ರಾತ್ರಿ 7:45ಕ್ಕೆ ಹುಬ್ಬಳ್ಳಿಯಿಂದ ಹೊರಡಲಿದ್ದು, ಮರುದಿನ ಮಧ್ಯಾಹ್ನ 1:45 ಗಂಟೆಗೆ ಸಿಎಸ್‌ಎಂಟಿ ಮುಂಬೈ ತಲುಪಲಿದೆ.

ಈ ವಿಶೇಷ ರೈಲು ಧಾರವಾಡ, ಲೋಂಡಾ, ಬೆಳಗಾವಿ, ಘಟಪ್ರಭಾ, ಮಿರಜ್, ಸಾಂಗ್ಲಿ, ಕರಾಡ್, ಸತಾರಾ, ಪುಣೆ, ಲೋನಾವಾಲಾ, ಕರ್ಜತ್, ಕಲ್ಯಾಣ್ ಮತ್ತು ದಾದರ್ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರಲಿದೆ.



ಈ ರೈಲು ಒಟ್ಟು 19 ಬೋಗಿಗಳನ್ನು ಒಳಗೊಂಡಿರಲಿದೆ. ಇದರಲ್ಲಿ 15 ಸಾಮಾನ್ಯ ದ್ವಿತೀಯ ದರ್ಜೆ/ಸ್ಲೀಪರ್ ಕ್ಲಾಸ್ ಬೋಗಿಗಳು, 02 ಎಸಿ ಬೋಗಿಗಳು (ಎಸಿ ಬೋಗಿಗಳು ಬೀಗ ಹಾಕಿದ ಸ್ಥಿತಿಯಲ್ಲಿರುತ್ತವೆ) ಮತ್ತು 02 ಲಗೇಜ್ ಕಮ್ ಬ್ರೇಕ್ ವ್ಯಾನ್ ಬೋಗಿಗಳು ಇರಲಿವೆ.

# ಟೀಮ್ ಇಂಡಿಯಾದ ಜರ್ಸಿ ಧರಿಸಲಿದ್ದಾರೆ ಕಾಶ್ಮೀರದ ಕ್ರಿಕೆಟರ್

ಹುಬ್ಬಳ್ಳಿ: ನಗರದ ರಾಜನಗರದ ಮೈದಾನದಲ್ಲಿ ನಡೆಯುತ್ತಿರುವ ರಣಜಿ ಪಂದ್ಯದಲ್ಲಿ ಜಮ್ಮು–ಕಾಶ್ಮೀರ ತಂಡ ಫೈನಲ್‌ಗೆ ತಲುಪಿರುವುದು ಹೆಮ್ಮೆಯ ವಿಷಯ. ಇದು ನಮಗೆ ಐತಿಹಾಸಿಕ ಜಯವಾಗಬಹುದಲ್ಲದೇ, ಮೊದಲ ಟೈಟಲ್ ಜಮ್ಮು ಮತ್ತು ಕಾಶ್ಮೀರದ ಭವಿಷ್ಯವನ್ನು ಬದಲಾಯಿಸಬಹುದು ಎಂದು ಜಮ್ಮು–ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ತಿಳಿಸಿದರು. ಹುಬ್ಬಳ್ಳಿಯ ವಿಮಾನ ನಿಲ್ದಾಣದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಮ್ಮು ಮತ್ತು ಕಾಶ್ಮೀರದಲ್ಲಿ ಉತ್ತಮ ಕ್ರಿಕೆಟಿಗರು ಇದ್ದಾರೆ ಎಂಬ ಸತ್ಯವನ್ನು



ಜನರು ಈಗ ಅರಿತುಕೊಳ್ಳಲಿದ್ದಾರೆ. ಆದರೆ, ಅವರಿಗೆ ಸೂಕ್ತ ಅವಕಾಶ ಮತ್ತು ಪರಿಚಯ ಸಿಗಬೇಕಿದೆ. ಆಗ ಖಂಡಿತ ವಾಗಿ ಜಮ್ಮು – ಕಾಶ್ಮೀರದ ಒಬ್ಬ ಅಥವಾ ಇಬ್ಬರು ಆಟಗಾರರು ಭಾರತೀ ಯ ತಂಡದ ಜರ್ಸಿ ಧರಿಸಲು ಅರ್ಹ ತೆ ಪಡೆಯುತ್ತಾರೆ. ಕ್ರಿಕೆಟ್ ಧರ್ಮ, ಭೇದಗಳನ್ನು ಮೀರಿ ಜನರನ್ನು ಒಂದಾಗಿಸುತ್ತದೆ ಎಂದರು.

# ದಲಿತರಿಗೆ ಕಟಿಂಗ್ ಮಾಡಲು ನಿರಾಕರಣೆ: ಸಲೂನ್ ಶಾಪ್ ತೆರೆದ ಸರ್ಕಾರ!



ಗದಗ: ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ಹಳ್ಳಿಯೊಂದರಲ್ಲಿ ನಡೆದ ವಿಚಿತ್ರ ಘಟನೆಗಳ ನಂತರ, ದಲಿತರಿಗೆ ಕ್ಷೌರ ಮಾಡಿಸಲು ರಾಜ್ಯ ಸರ್ಕಾರವೇ ಕ್ಷೌರದಂಗಡಿಯನ್ನು ತೆರೆದಿದೆ.

ಸಮಾಜ ಕಲ್ಯಾಣ ಇಲಾಖೆ, ಗ್ರಾಮ ಪಂಚಾಯಿತಿ ಹಾಗೂ ಆದಾಯ ಇಲಾಖೆ ಅಧಿಕಾರಿಗಳ ನೇತೃತ್ವದಲ್ಲಿ ಸಲೂನ್?? ಶುರುವಾಗಿದ್ದು, ಗ್ರಾಮದಲ್ಲಿ ವರ್ಷಗಳಿಂದ ಮುಂದುವರಿದಿದ್ದ ಜಾತಿ ಆಧಾರಿತ ಭೇದಭಾವವನ್ನು ನಿರ್ಮೂಲನೆ ಮಾಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ.

ಗ್ರಾಮದ ದೈವವಾದ ವೀರಭದ್ರೇಶ್ವರನ ಭಕ್ತರಾಗಿರುವ ಹಡಪದ ಕುಟುಂಬಗಳು ಪರಂಪರೆ ಹೆಸರಿನಲ್ಲಿ ದಲಿತರಿಗೆ ಕ್ಷೌರ ಸೇವೆ ನಿರಾಕರಿಸುತ್ತಿದ್ದವು. ಉದ್ವಿಗ್ನತೆ ಹೆಚ್ಚಾದಾಗ, ಸ್ಥಳೀಯ ಆಡಳಿತ ಅಧಿಕಾರಿಗಳು ಗ್ರಾಮಕ್ಕೆ ತಲುಪಿ ಶಾಂತಿ ಸಭೆಗಳನ್ನು ನಡೆಸಿದರು. ಆದರೆ ಅವರ ಪ್ರಯತ್ನಗಳ ಹೊರತಾಗಿಯೂ, ಕ್ಷೌರಿಕರು ದಲಿತರಿಗೆ ಕ್ಷೌರ ಮಾಡಲು ನಿರಾಕರಿಸಿದರು. ಆಡಳಿತವು ಅಂಗಡಿಗೆ ನೋಟಿಸ್ ನೀಡಿ ಅದನ್ನು ಮುಚ್ಚಲು ಸೂಚಿಸಿತು.

ಗುರುವಾರ, ಸಮಾಜ ಕಲ್ಯಾಣ ಇಲಾಖೆಯು ದಲಿತರು ಮತ್ತು ಇತರ ಗ್ರಾಮಸ್ಥರು ಕ್ಷೌರ ಮಾಡಿಸಿಕೊಳ್ಳಬಹುದಾದ ಹೊಸ ಕ್ಷೌರದಂಗಡಿಯನ್ನು ತೆರೆದಿತು. ಆದರೆ ದಲಿತರ ಪ್ರವೇಶಕ್ಕೆ ವಿರೋಧವಿರುವ ಕಡೆ ಸರ್ಕಾರ ಕ್ಷೌರದಂಗಡಿಗಳು, ದೇವಾಲಯಗಳು ಮತ್ತು ಹೋಟೆಲ್‌ಗಳನ್ನು ನಿರ್ಮಿಸುವುದನ್ನು ಮುಂದುವರಿಸಲು ಸಾಧ್ಯವಿಲ್ಲ ಎಂದು ದಲಿತ ಕಾರ್ಯಕರ್ತರು ಹೇಳಿದ್ದಾರೆ.

ಗ್ರಾಮದ ಕ್ಷೌರಿಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು . ದಲಿತರು ತಾರತಮ್ಯವನ್ನು ಎದುರಿಸದಂತೆ ನೋಡಿಕೊಳ್ಳಲು ಹೊಸ ಕಾನೂನುಗಳನ್ನು ಜಾರಿಗೆ ತರಬೇಕೆಂದು ಒತ್ತಾಯಿಸಿದರು. ಗದಗ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ನಂದಾ ಹಣಬಟ್ಟಿ ಅಂಗಡಿಯನ್ನು ಉದ್ಘಾಟಿಸಿ, ಜನರು ಮೇಲು–ಕೀಳು ಎಂಬ ಭಾವನೆಗಳನ್ನು ಬಿಟ್ಟು ಎಲ್ಲರೂ ಸಮಾನರು ಎಂಬ ಉದಾತ್ತ ಮನಸ್ಥಿತಿಯೊಂದಿಗೆ ಬದುಕಬೇಕೆಂದು ಕರೆ ನೀಡಿದರು.

ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳಾದರೂ ಚಂದ್ರನ ಮೇಲೆ ಸಂಶೋಧನೆ ನಡೆಯುತ್ತಿರುವಾಗಲೂ ಅಸ್ಪೃಶ್ಯತೆ ಇನ್ನೂ ಅಸ್ತಿತ್ವದಲ್ಲಿರುವುದು ದುರದೃಷ್ಟಕರ ಎಂದು ತಹಶೀಲ್ದಾರ್ ಪಿ.ಎಸ್.ಎರ್ರಿಸ್ವಾಮಿ ಬೇಸರ ವ್ಯಕ್ತಪಡಿಸಿದರು.

## ಸಾಮಾಜಿಕ ಬಹಿಷ್ಕಾರಕ್ಕೆ ಸೂಕ್ತ ಕ್ರಮ : ತಹಶೀಲ್ದಾರ್

ಕ್ಷೌರಿಕ ಸೇವೆಗಳನ್ನು ನೀಡಲು ನಿರಾಕರಿಸುವುದು ಮತ್ತು ಹೋಟೆಲ್‌ಗಳು ಮತ್ತು ದೇವಾಲಯಗಳಿಗೆ ಪ್ರವೇಶ ನಿರಾಕರಿಸುವುದು ಕಾನೂನುಬಾಹಿರ ಕೃತ್ಯಗಳು. ಸಾಮಾಜಿಕ ಅನಿಷ್ಟಗಳನ್ನು ನಿರ್ಮೂಲನೆ ಮಾಡಲು ಸಮಾಜ ಕಲ್ಯಾಣ ಇಲಾಖೆ ಮತ್ತು ಜಿಲ್ಲಾಡಳಿತ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಅಂತಹ ತಾರತಮ್ಯ ಪದ್ಧತಿಗಳು ಎಲ್ಲಿಯಾದರೂ ಕಂಡುಬಂದರೆ, ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಹಶೀಲ್ದಾರ್ ಪಿ.ಎಸ್.ಎರ್ರಿಸ್ವಾಮಿ ಹೇಳಿದರು.

ದಲಿತ ಕಾರ್ಯಕರ್ತ ಕರಿಯಪ್ಪ ಗುಡಿಮನಿ ಮಾತನಾಡಿ, ಸರ್ಕಾರವು ಕ್ಷೌರ ಅಂಗಡಿಯನ್ನು ತೆರೆಯುವುದು ಸ್ವಾಗತಾರ್ಹ ಕ್ರಮವಾಗಿದೆ, ಆದರೆ ಅದು ನಿಜವಾದ ಸಾಮರಸ್ಯದ ಮನೋಭಾವವನ್ನು ಪೂರೈಸುವುದಿಲ್ಲ. "ಅಸ್ತಿತ್ವದಲ್ಲಿರುವ ಕಾನೂನಿನ ಹೊರತಾಗಿಯೂ, ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕದ ಅನೇಕ ಹಳ್ಳಿಗಳು ಅಸ್ಪೃಶ್ಯತೆಯನ್ನು ಆಚರಿಸುತ್ತಿವೆ. ಗದಗ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಈ ಸಮಸ್ಯೆ ಬಹಳ ಹಿಂದಿನಿಂದಲೂ ಇದೆ. ದಲಿತರು ಎಲ್ಲಾ ದೇವಸ್ಥಾನ, ಕ್ಷೌರಿಕನ ಅಂಗಡಿ ಅಥವಾ ಹೋಟೆಲ್‌ಗೆ ಪ್ರವೇಶಿಸಲು ಸಾಧ್ಯವಾಗಬೇಕು. ಹಳ್ಳಿಗಳಲ್ಲಿ ದಿನಸಿ ಅಂಗಡಿಗಳಿಗೆ ಹೋದಾಗಲೂ ಅವರು ತಾರತಮ್ಯವನ್ನು ಎದುರಿಸುತ್ತಾರೆ. ಸರ್ಕಾರ ಅವರಿಗಾಗಿ ಅಂಗಡಿ ತೆರೆಯುತ್ತದೆಯೇ ಎಂದು ಪ್ರಶ್ನಿಸಿದ್ದಾರೆ.

# ಸ್ಪೀಡ್ ಪೋಸ್ಟ್ ಮತ್ತು ಇತರ ಪತ್ರ ಹಾಗೂ ಪಾರ್ಸೆಲ್‌ಗಳ ಬುಕ್ಕಿಂಗ್ ಅವಧಿ ವಿಸ್ತರಣೆ

ಧಾರವಾಡ: ಸಾರ್ವಜನಿಕರ ಅನುಕೂಲಕ್ಕಾಗಿ, ಭಾರತೀಯ ಅಂಚೆ ಇಲಾಖೆಯ ವತಿಯಿಂದ ಎಲ್ಲಾ ಇಲಾಖಾ ಅಂಚೆ ಕಚೇರಿಗಳಲ್ಲಿ ಕಚೇರಿ ಕಾರ್ಯ ಸಮಯ ಮುಕ್ತಾಯವಾಗುವ ಮೊದಲು ಕೊನೆಯ 30 ನಿಮಿಷಗಳವರೆಗೆ ಅಂಚೆ ವಸ್ತುಗಳನ್ನು ಬುಕ್ ಮಾಡುವ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಎಂಬುದನ್ನು ಸಾರ್ವಜನಿಕರಿಗೆ ತಿಳಿಸಲಾಗುತ್ತದೆ.

ಈ ವ್ಯವಸ್ಥೆಯಡಿ, ಕಾರ್ಯದಿನಗಳಲ್ಲಿ ಇಲಾಖಾ ಅಂಚೆ ಕಚೇರಿಗಳ ನಿಗದಿತ ಕಾರ್ಯಾವಧಿ ಮುಕ್ತಾಯಕ್ಕೆ ಮುಂಚಿತವಾಗಿ 30 ನಿಮಿಷಗಳವರೆಗೆ ಸ್ಪೀಡ್ ಪೋಸ್ಟ್, ಪಾರ್ಸೆಲ್ ಹಾಗೂ ಅಂತರರಾಷ್ಟ್ರೀಯ ಸ್ಪೀಡ್ ಪೋಸ್ಟ್, ಪಾರ್ಸೆಲ್‌ಗಳನ್ನು ಬುಕ್ ಮಾಡಬಹುದಾಗಿದೆ. ಇದರಿಂದ ಕಚೇರಿ ಸಮಯದ ಅಂತ್ಯದಲ್ಲಿ ಅಂಚೆ ಕಚೇರಿಗೆ ಬರುವ ಗ್ರಾಹಕರಿಗೂ ತಮ್ಮ ಅಂಚೆ ವಸ್ತುಗಳನ್ನು ಸುಲಭವಾಗಿ ಬುಕ್ ಮಾಡುವ ಅವಕಾಶ ದೊರೆಯುತ್ತದೆ.

ಮನೆಯಲ್ಲಿಯೇ ಕುಳಿತು ಪತ್ರ, ಪಾರ್ಸೆಲ್‌ಗಳ ಬುಕ್ಕಿಂಗ್ ಸೌಲಭ್ಯ (Customer Self Service Portal): ಸಾರ್ವಜನಿಕರ ಸೌಕರ್ಯಕ್ಕಾಗಿ ಭಾರತೀಯ ಅಂಚೆ ಇಲಾಖೆಯ ಗ್ರಾಹಕ ಸ್ವಯಂ ಸೇವಾ ಪೋರ್ಟಲ್ (Customer Self Service https://app.indiapost.gov.in/customer-selfservice/login) ಲಭ್ಯವಿದ್ದು, ಇದರ ಮೂಲಕ ಅಂಚೆ ವಸ್ತುಗಳ ಬುಕ್ಕಿಂಗ್, ಟ್ರ್ಯಾಕಿಂಗ್, ದೂರು ಸಲ್ಲಿಕೆ, ಸೇವೆಗಳ ವಿವರಗಳು ಹಾಗೂ ಇತರೆ ಅನೇಕ ಸೇವೆಗಳನ್ನು ಆನ್‌ಲೈನ್‌ನಲ್ಲೇ ಪಡೆಯಬಹುದು. ಸಾರ್ವಜನಿಕರು ಈ ಡಿಜಿಟಲ್ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬಹುದು.

**ಡಾಕ್ ಸೇವಾ ಆಪ್:** ಅಂಚೆ ಸೇವೆಗಳನ್ನು ಇನ್ನಷ್ಟು ಸುಲಭವಾಗಿ ಪಡೆಯುವ ಉದ್ದೇಶದಿಂದ ಭಾರತೀಯ ಅಂಚೆ ಇಲಾಖೆ ಡಾಕ್ ಸೇವಾ ಆಪ್ ಅನ್ನು ಬಿಡುಗಡೆ ಮಾಡಿದೆ. ಈ ಮೊಬೈಲ್ ಆಪ್ ಮೂಲಕ ಅಂಚೆ ವಸ್ತುಗಳ ಬುಕ್ಕಿಂಗ್, ಟ್ರ್ಯಾಕಿಂಗ್, ದೂರು ನೋಂದಣಿ, ಸೇವಾ ಮಾಹಿತಿ ಸೇರಿದಂತೆ ವಿವಿಧ ಗ್ರಾಹಕ ಸೇವೆಗಳು ಮೊಬೈಲ್‌ನಲ್ಲೇ ಲಭ್ಯವಿರುತ್ತವೆ.

ಸಾರ್ವಜನಿಕರು ಈ ಆಪ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಳಸಬಹುದು. ಡೌನ್‌ಲೋಡ್ ಮಾಡಲು ಅಗತ್ಯವಾದ ಕ್ಯೂಆರ್ ಕೋಡ್ ಭಾರತೀಯ ಅಂಚೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ತಮ್ಮ ಸಮೀಪದ ಇಲಾಖಾ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಕೊಲ್ಹಾರದಲ್ಲಿ ರಮಜಾನ್–ಹೋಳಿ ಶಾಂತಿ ಸಭೆ: ಸೌಹಾರ್ದದಿಂದ ಹಬ್ಬ ಆಚರಿಸಲು ಕರೆ

ಕೊಲ್ಹಾರ: ರಮಜಾನ್ ಮತ್ತು ಹೋಳಿ ಹಬ್ಬಗಳ ಹಿನ್ನೆಲೆಯಲ್ಲಿ ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಶುಕ್ರವಾರ ಶಾಂತಿ ಸಭೆ ನಡೆಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಪಿಎಸ್‌ಐ ಅಶೋಕ ನಾಯಕ, ಹಬ್ಬಗಳನ್ನು ಪರಸ್ಪರ ಗೌರವ ಮತ್ತು ಸೌಹಾರ್ದದಿಂದ ಆಚರಿಸುವಂತೆ ಕರೆ ನೀಡಿದರು.

ಭಾರತವು ಬಹುಧರ್ಮೀಯ ಮತ್ತು ಬಹುಸಾಂಸ್ಕೃತಿಕ ದೇಶವಾಗಿದ್ದು, ಎಲ್ಲ ಸಮುದಾಯದವರು ತಮ್ಮ ಸಂಪ್ರದಾಯದಂತೆ ಹಬ್ಬಗಳನ್ನು ಆಚರಿಸುವ ಹಕ್ಕು ಹೊಂದಿದ್ದಾರೆ. ಹಿಂದೂ–ಮುಸ್ಲಿಂ ಬಾಂಧವರು ಪರಸ್ಪರ ಸಹಕಾರದಿಂದ, ಯಾರ ಧಾರ್ಮಿಕ ಭಾವನೆಗಳಿಗೂ ಧಕ್ಕೆ ಉಂಟಾಗದಂತೆ ಹಬ್ಬಗಳನ್ನು ಶಾಂತಿಯುತವಾಗಿ ಆಚರಿಸಬೇಕು ಎಂದು ಹೇಳಿದರು.

ಹೋಳಿ ಹಬ್ಬದ ಸಂದರ್ಭದಲ್ಲಿ ಮಂದಿರ, ಮಸೀದಿ ಹಾಗೂ ಅಪರಿಚಿತ ವ್ಯಕ್ತಿಗಳ ಮೇಲೆ ಬಣ್ಣ ಎರಚಬಾರದು. ಅಹಿತಕರ ಘಟನೆಗಳಿಗೆ ಕಾರಣರಾದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಸಿಸಿ ಟಿವಿ ಕ್ಯಾಮೆರಾಗಳನ್ನು




ಅಳವಡಿಸಲಾಗಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಅಗತ್ಯ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

ಬೈಕ್ ಸೈಲೆನ್ಸರ್ ಬದಲಿಸಿ ಕರ್ಕಶ ಶಬ್ದ ಮಾಡಿಸುವವರ ವಿರುದ್ಧ ಈಗಾಗಲೇ ಕ್ರಮ ಜರುಗಿಸಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುವ ಸಂದೇಶಗಳನ್ನು ಹಂಚಿದವರ ಮೇಲೂ ಕಣ್ಗಾವಲು ಇರುತ್ತದೆ ಎಂದು ಹೇಳಿದರು. 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ಬೈಕ್ ನೀಡಿದರೆ 25,000 ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ರೈತರ ಜಮೀನುಗಳಿಗೆ ಕೂಲಿ ಕೆಲಸಕ್ಕೆ ತೆರಳುವವರು ಗೂಡ್ಸ್ ವಾಹನಗಳಲ್ಲಿ ಪ್ರಯಾಣಿಸದೆ, ಸುರಕ್ಷಿತ ವಾಹನಗಳನ್ನು ಬಳಸಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಟಿ.ಟಿ. ಹಗೇದಾಳ ಮಾತನಾಡಿ, ಹೋಳಿ ಹಬ್ಬವನ್ನು ಪರಿಸರ ಸ್ನೇಹಿ ಬಣ್ಣಗಳಿಂದ ಆಚರಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಸಿ.ಎಂ. ಗಣಕುಮಾರ, ಅಲ್ಲಾಭಕ್ಷ ಬಿಜಾಪುರ, ಉಸ್ಮಾನ್ ಪಟೇಲ್ ಖಾನ್ನವರ ಸೇರಿದಂತೆ ಹಲವು ಮುಖಂಡರು ಮಾತನಾಡಿದರು.ಪಟ್ಟಣ ಪಂಚಾಯತಿ ಅಧ್ಯಕ್ಷ ಚನಮಲ್ಲಪ್ಪ ಗಿಡ್ಡಪ್ಪಗೋಳ, ಆರ್.ಬಿ. ಪಕಾಲಿ, ಹನಿಫ್ ಮಕಾನದಾರ, ವಿರುಪಾಕ್ಷಿ ಕೊಲಕಾರ, ಶ್ರೀಶೈಲ ಮುಳವಾಡ, ವಿಜಯಮಹಾಂತೇಶ ಗಿಡ್ಡಪ್ಪಗೋಳ, ಪ.ಪಂ.ರವಿ ಇಂಡಿ, ರಿಯಾಜ್ ಗಿರಗಾಂವಿ, ಮಹೇಶ ತುಂಬರಮಟ್ಟಿ, ತಿಪ್ಪಣ್ಣ ಕುದರಿ, ಹನಮಂತ ಮುಳವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ತಾಯಿ ಹಾಗೂ ಶಿಕ್ಷಕನ ಋಣ ತೀರಿಸಲು ಎಂದಿಗೂ ಸಾಧ್ಯವಿಲ್ಲ



ವಿಜಯಪುರ: ಜಗತ್ತಿನಲ್ಲಿ ತಾಯಿ ಋಣ ಹಾಗೂ ಕಲಿಸಿದ ಶಿಕ್ಷಕನ ಋಣ ಯಾವ ಕಾಲಕ್ಕೂ ತೀರಿಸಲು ಸಾಧ್ಯವಿಲ್ಲದಂತಹ ಅದ್ಭುತ ತ್ಯಾಗಿ ಜೀವಿ ಇವರಿಬ್ಬರು. ನಾನು ಇಂತಹ ಶಿಕ್ಷಕರ ಕೈಯಲ್ಲೇ ಕಲಿತು ಒಂದು ಮಠದ ಸ್ವಾಮೀಜಿಯಾಗಿದ್ದೇನೆ ಎಂಬ ಹೆಮ್ಮೆ ನನಗಿದೆ ಎಂದು ಮನಗೂಳಿ ಹಿರೇಮಠ ಶ್ರೀ.ಷ.ಬ್ರ.ಅಭಿನವ ಸಂಗನಬಸವ ಶಿವಾಚಾರ್ಯರು ಹೇಳಿದರು.

ಬಸವನ ಬಾಗೇವಾಡಿ ತಾಲೂಕಿನ ಮನಗೂಳಿಯ ಶ್ರೀ ಎಸ್.ಬಿ.ಪಾಟೀಲ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ 2003–04ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ 2005–06ನೇ ಸಾಲಿನ ಪಿಯುಸಿ ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ವಹಿಸಿ ಮಾತನಾಡಿದ ಅವರು, ದೇಶದ ಭವಿಷ್ಯದ ಪೀಳಿಗೆಯನ್ನು ತಮ್ಮ ಜ್ಞಾನದಿಂದ ಶ್ರೀಮಂತಗೊಳಿಸುವ ಮುಖಾಂತರ ದೇಶದ ಅಡಿಪಾಯವನ್ನು ನಿರ್ಮಿಸುವಲ್ಲಿ ಶಿಕ್ಷಕರು ಪ್ರಮುಖ ಪಾತ್ರ ವಹಿಸುತ್ತಾರೆ ಎಂದರು.

ಶಿಕ್ಷಕ ಎಸ್.ಎಸ್. ಬಿರಾದಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಈಗಿನ ವಿದ್ಯಾರ್ಥಿಗಳು ವ್ಯರ್ಥ ಸಮಯ ಹಾಳು ಮಾಡುತ್ತಿದ್ದಾರೆ. ಕೊಟ್ಟ ಸಮಯವನ್ನು ಸರಿಯಾಗಿ ಉಪಯೋಗ ಮಾಡಿಕೊಳ್ಳಬೇಕು ಎಂದರು.

ಶಿಕ್ಷಕ ಬಿ.ಬಿ. ಲಗಟಿಗೇರ ಅಧ್ಯಕ್ಷತೆ ವಹಿಸಿ ಮಾತನಾಡಿ, ಹಳೆಯ ವಿದ್ಯಾರ್ಥಿಗಳು ಗುರುವಂದನವನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ. ಅವರು ವಿದ್ಯಾರ್ಥಿ ಜೀವನವನ್ನು ಮುಗಿಸಿಕೊಂಡು ಒಳ್ಳೆಯ ಕೆಲಸ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ. ರೈತರಾಗಿದ್ದಾರೆ, ಪೊಲೀಸರಾಗಿದ್ದಾರೆ, ಇಂಜಿನಿಯರ್‌ಗಳಾಗಿದ್ದಾರೆ, ವಕೀಲರಾಗಿದ್ದಾರೆ, ಶಿಕ್ಷಕರಾಗಿದ್ದಾರೆ. ಹೀಗೆ ಅವರ ಮಕ್ಕಳಿಗೂ ಉನ್ನತ ಸ್ಥಾನ ಸಿಗಲಿ, ಮಕ್ಕಳಿಗೆ ಸಂಸ್ಕಾರ ಕೊಡುವಂತಾಗಲಿ ಎಂದರು.

ಶಿಕ್ಷಕರಾದ ಎಂ.ಎಸ್.ಮಾದರ, ಸಿ.ಬಿ.ಸಜ್ಜನ, ಬಿ.ಎಚ್.ಹಿರೇಮಠ, ಎಂ.ಬಿ.ಗುಮ್ಮಡಿ, ಎಸ್.ಬಿ. ಬಿರಾದಾರ, ಪಿ.ಟಿ. ರಾಠೋಡ. ಆರ್.ಕೆ. ಹನಗಂಡಿ, ಎಂ.ಎಸ್. ನಾಯಕ, ಬಿ.ಎಂ. ಪಾಟೀಲ. ಡಿ.ಎಸ್. ಬಂಡಗಾರ. ಎಸ್.ಬಿ. ಬಿಳೂರ, ಐ.ಡಿ. ಚೆನ್ನಾಳ, ಸಿಪಾಯಿಗಳಾದ ಕೆ.ಟಿ. ಕರಾಬಿ, ಸಂಗಪ್ಪ ಹಡಪದ, ಎಂ.ಎಲ್. ಮನಗೂಳಿ, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ನೂತನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಕಟ್ಟಡ ಉದ್ಘಾಟನೆ

ಬಾಗಲಕೋಟೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಮತ್ತು ಕೃತಿ ಸಂಬಂಧಿತ ಇಲಾಖೆಗಳ ಆಶ್ರಯದಲ್ಲಿ ಫೆಬ್ರವರಿ 28 ರಂದು ಜಿಲ್ಲಾ ತರಬೇತಿ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ, ಕಬ್ಬಿನಲ್ಲಿ ಮಣ್ಣಿನ ಆರೋಗ್ಯ & ನೀರಿನ ಸಮಗ್ರ ನಿರ್ವಹಣೆ ಹಾಗೂ ಎಣ್ಣೆಕಾಳು ಬೆಳೆಗಳ ನವೀನ ತಾಂತ್ರಿಕತೆಗಳ ಕುರಿತು ತಾಂತ್ರಿಕ ಗೋಷ್ಠಿ ಮತ್ತು ದೇಸಿ ತಳಿಗಳ ಸಂರಕ್ಷಣೆ ಮತ್ತು ಪ್ರದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಮಧ್ಯಾಹ್ನ 2 ಗಂಟೆಗೆ ನವನಗರದ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಆವರಣದಲ್ಲಿ ಜರಗುವ ಕಾರ್ಯಕ್ರಮದ ಉದ್ಘಾಟನೆ ಹಾಗೂ ಅಧ್ಯಕ್ಷತೆಯನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ವಹಿಸಲಿದ್ದು, ವಿಶೇಷ ಆಹ್ವಾನಿತರಾಗಿ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಆಗಮಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ನವದೆಹಲಿಯ ಕರ್ನಾಟಕದ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ವಿಧಾನ ಸಭಾ, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

# ರಾಜ್ಯದಲ್ಲಿ ಹೆಚ್ಚುತ್ತಿರುವ ನಿರುದ್ಯೋಗ ಸಮಸ್ಯೆ ತಡೆಗಟ್ಟಿ: ಶೀಘ್ರವೇ ಖಾಯಂ ನೇಮಕಾತಿ ಪ್ರಕ್ರಿಯೆ ಆರಂಭಿಸಲು ಆಗ್ರಹ

ವಿಜಯಪುರ: ಕರ್ನಾಟಕದ ಎಲ್ಲಾ ವರ್ಗದ ಲಕ್ಷಾಂತರ ಉದ್ಯೋಗಾಕಾಂಕ್ಷಿಗಳು ಇಂದು ಅತ್ಯಂತ ಸಂಕಷ್ಟದ ಪರಿಸ್ಥಿತಿಯಲ್ಲಿದ್ದು, ಶೀಘ್ರವೇ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ನಾಡಿನ ಯುವಜನರಿಗೆ ಖಾಯಂ ಉದ್ಯೋಗ ನೀಡಬೇಕೆಂದು ಆಗ್ರಹಿಸಿ ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ವಿಜಯಪುರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಕುರಿತು ಮಾತನಾಡಿದ ದಲಿತ ವಿದ್ಯಾರ್ಥಿ ಪರಿಷತ್ ರಾಜ್ಯ ಸಂಚಾಲಕ ಬಾಲಾಜಿ ಕಾಂಬಳೆ, ಈಗಾಗಲೇ ದಲಿತ ವಿದ್ಯಾರ್ಥಿ ಪರಿಷತ್ ನೇಮಕಾತಿ ಪ್ರಕ್ರಿಯೆ ಆರಂಭಿಸಲು ಹಲವು ಹೋರಾಟದ ಮೂಲಕ ಸರ್ಕಾರಕ್ಕೆ ಮನವಿ ಮಾಡುತ್ತಾ ಬಂದಿದ್ದೆ. ರಾಜ್ಯದಲ್ಲಿ ನೇಮಕಾತಿ ಪ್ರಕ್ರಿಯೆಗಳು ವಿಳಂಬವಾಗುತ್ತಿರುವುದರಿಂದ ಲಕ್ಷಾಂತರ ಯುವಕರು ಮಾನಸಿಕ ಖಿನ್ನತೆಗೆ ಒಳಗಾಗಿದ್ದಾರೆ. ಅತೀ ಹೆಚ್ಚು ವಿದ್ಯಾಭ್ಯಾಸ ಮಾಡಿಯೂ ಉದ್ಯೋಗವಿಲ್ಲದೆ, ಮನೆಯವರ ನಿರೀಕ್ಷೆಗಳನ್ನು ಪೂರೈಸಲಾಗದೆ ರಾಜ್ಯದ ಹಲವು ಭಾಗಗಳಲ್ಲಿ ನಿರುದ್ಯೋಗಿ ಯುವಕರು ಆತ್ಮಹತ್ಯೆಯಂತಹ ಅತೀ ದಾರುಣ ಹಾದಿ ಹಿಡಿಯುತ್ತಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಯುವಶಕ್ತಿಯನ್ನು ಈ ಹತಾಶೆಯಿಂದ ಹೊರತರುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಸರ್ಕಾರವು ಬಹುತೇಕ ಇಲಾಖೆಗಳಲ್ಲಿ ಖಾಯಂ ಹುದ್ದೆಗಳನ್ನು ಭರ್ತಿ ಮಾಡುವ ಬದಲಿಗೆ 'ಒಳ ಗುತ್ತಿಗೆ' ಅಥವಾ 'ಹೊರಗುತ್ತಿಗೆ' ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿದೆ.




ಇದರಿಂದ ಯುವಕರಿಗೆ ಉದ್ಯೋಗ ಭದ್ರತೆ ಇಲ್ಲದಂತಾಗಿದೆ ಮತ್ತು ಇದು ಯುವಜನರ ಬದುಕಿನ ಜೊತೆ ಆಟವಾಡಿದಂತಾಗಿದೆ. ದಯವಿಟ್ಟು ಈ ಪದ್ಧತಿಯನ್ನು ಕೈಬಿಟ್ಟು, ಸಂವಿಧಾನಬದ್ಧವಾಗಿ ನೇರ ಮತ್ತು ಖಾಯಂ ನೇಮಕಾತಿ ಪ್ರಕ್ರಿಯೆ ಆರಂಭಿಸಬೇಕು. ಕೋವಿಡ್ ಕಾರಣದಿಂದ ಮತ್ತು ಒಳಮೀಸಲಾತಿ ಜಾರಿಯಿಂದಾಗಿ ಪರೀಕ್ಷೆಗಳು ಸರಿಯಾದ ಸಮಯಕ್ಕೆ ನಡೆಯದ ಕಾರಣ ಲಕ್ಷಾಂತರ ಅಭ್ಯರ್ಥಿಗಳು ವಯೋಮಿತಿ ಮೀರಿದ್ದಾರೆ. ಇವರಿಗೆ ನ್ಯಾಯ ಒದಗಿಸಲು ಕನಿಷ್ಠ 5 ವರ್ಷಗಳ ವಯೋಮಿತಿ ಸಡಿಲಿಕೆ ಅತೀ ಅಗತ್ಯವಾಗಿದೆ. ಈ ಬಗ್ಗೆ ನಿಮ್ಮ ಸರ್ಕಾರ ವಯೋಮಿತಿ ಸಡಿಲಗೊಳಿಸಿರುವದು ಸಕಾರಾತ್ಮಕ ಸ್ಪಂದನೆ ನೀಡಿದೆ. ಆದರೆ ಬಹು ದಿನಗಳ ದಲಿತ ಸಮುದಾಯದ ಒಳಮೀಸಲಾತಿ ಜಾರಿಗೆ ಸರ್ಕಾರದ ವಿಳಂಬ ನೀತಿ ಅನುಸರಿಸುತ್ತಿರುವದು ನಿರಾಶೆ ಮೂಡಿಸಿದೆ. ಕೂಡಲೇ ಪೂರ್ಣ ಪ್ರಮಾಣದಲ್ಲಿ ಒಳಮೀಸಲಾತಿ ಜಾರಿ ಮಾಡಿ ಅದರಂತೆ ನೇಮಕಾತಿ ಅಧಿಸೂಚನೆ ಹೊರಡಿಸಬೇಕು.

ಉದ್ಯೋಗ ಮೇಳ ಹೆಸರಿನಲ್ಲಿ ಈ ನಾಡಿನ ಯುವ ಶಕ್ತಿಯನ್ನು ಖಾಸಗಿ ಕಂಪನಿಗಳಿಗೆ ನೀಡುವ ಬದಲು ಸರ್ಕಾರದಿಂದ ನೇಮಕಾತಿ ಪ್ರಕ್ರಿಯೆ ನಡೆಯಲಿ. ನಾಡಿನ ಯುವ ಶಕ್ತಿ ಈ ನಾಡನ್ನು ಕಟ್ಟಲು ಸದ್ಬಳಕೆ ಆಗಲಿ ಎಂಬದು ನಮ್ಮೆಲ್ಲರ ಆಶಯವಾಗಿದೆ. ಖಾಲಿ ಇರುವ 2.8 ಲಕ್ಷಕ್ಕೂ ಅಧಿಕ ಹುದ್ದೆಗಳಿಗೆ ಹಂತ–ಹಂತವಾಗಿ ಶೀಘ್ರವೇ ಅಧಿಸೂಚನೆ ಹೊರಡಿಸಿ, ಅಭ್ಯರ್ಥಿಗಳಲ್ಲಿ ಭರವಸೆ ಮೂಡಿಸಬೇಕು ಎಂದರು.

ಬಡ ಮತ್ತು ಮಧ್ಯಮ ವರ್ಗದ ಪ್ರತಿಭಾವಂತ ಯುವಕರು ಇನ್ನು ಮುಂದೆ ಸಾವಿಗೆ ಶರಣಾಗದಂತೆ ತಡೆಯಲು ಮತ್ತು ಅವರಿಗೆ ಗೌರವಯುತ ಬದುಕು ನೀಡಲು ಸರ್ಕಾರ ತಕ್ಷಣವೇ ಸ್ಪಂದಿಸಬೇಕು. ಈ ವಿಚಾರದಲ್ಲಿ ತಾವು ವಿಳಂಬ ನೀತಿ ಅನುಸರಿಸಿದರೆ ಮುಂದಿನ ದಿನಗಳಲ್ಲಿ ನಿರುದ್ಯೋಗಿ ಯುವಜನರು ಮತ್ತು ವಿದ್ಯಾರ್ಥಿಗಳಿಗೆ ಸಂಘಟಿಸಿ ದೊಡ್ಡ ಮಟ್ಟದಲ್ಲಿ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಬಾಲಾಜಿ ಕಾಂಬಳೆ ಹೇಳಿದರು.

ಈ ವೇಳೆ ದಲಿತ ವಿದ್ಯಾರ್ಥಿ ಪರಿಷತ್ ನ ಜಿಲ್ಲಾ ಸಹ ಸಂಚಾಲಕ ಮಹಾದೇವ ಚಲವಾದಿ, ದಾವೂದ್ ನಾಯ್ಕೋಡಿ, ಹುಚ್ಚಪ್ಪ ಭಾವಿಮನಿ, ಸಿದ್ದು ಸಿಂಗೆ, ಮಹೇಶ ಕೊಳ್ಳಿ, ವಿನೋದ್, ಸಂದೇಶ, ಮಂಜು ಬಿಸನಾಳ, ವಿರೇಶ, ದಾನೇಶ್, ಮಂಜುನಾಥ್, ಪ್ರಕಾಶ ಮತ್ತಿತರರು ಇದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 591307